ಬುಧವಾರ 26.11.2025
ಬೆಂಗಳೂರು, ಬೆಲೆ: 5ರೂ,
2 ಪುಟಗಳು
ಸಂಪುಟ 01 - ಸಂಚಿಕೆ 109
Digital Varthe Kannada Daily
Volume 01 - Issue 109
Wednesday 26.11.2025
Price: 5/- Rs
2 Pages Bangalore

PRGI/RNI: KNKAN/25/A1348


# ಡಿಜಿಟಲ್ ವಾರ್ತೆ

ಕನ್ನಡಿಗರ ಶಕ್ತಿ

ಕನ್ನಡ ದಿನಪತ್ರಿಕೆ

DIGITAL VARTHE
digitalvarthe@gmail.com
www.digitalvarthe.com

## ಮೆಸೇಜ್ ಕಳುಹಿಸಿ ಲೈಂಗಿಕ ಕಿರುಕುಳ: ಆರೋಪ




**ಚಿಕ್ಕಮಗಳೂರು**: ಮೆಡಿಕಲ್ ಕಾಲೇಜು ಅನಾ ಟಮಿ ಪ್ರೊಫೆಸರ್ ಗಂಗಾಧರ್ ವಿರುದ್ಧ ಗಂಭೀರ ಆರೋಪ ಕೇಳಿಬಂದಿದೆ. ಬೆಂಗಳೂರು ಮೂಲದ ಮೂರನೇ ಸೆಮಿಸ್ಟರ್‌ನ ವೈದ್ಯಕೀಯ ವಿದ್ಯಾರ್ಥಿನಿಗೆ ವಾಟ್ಸ್‌ಆ್ಯಪ್ ಮೂಲಕ ಅಶ್ಲೀಲ ಸಂದೇಶಗಳನ್ನು ಕಳುಹಿಸಿದ್ದಲ್ಲದೆ, ಲೈಂಗಿಕ ಕಿರುಕುಳ ನೀಡಿದ್ದಾರೆ ಎಂದು ಆರೋಪಿಸಲಾಗಿದೆ.

ಈ ಸಂಬಂಧ ಇದೀಗ ಚಿಕ್ಕಮಗಳೂರು ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಡೀನ್ ಹಾಗೂ ನಿರ್ದೇಶಕ ಹರೀಶ್ ಪ್ರೊಫೆಸರ್ ಗಂಗಾಧರ್‌ಗೆ ಶೋಕಾಸ್ ನೋಟಿಸ್ ಜಾರಿಗೊಳಿಸಿದ್ದಾರೆ. ಗಂಗಾಧರ್ ರಿಂದ ಕಿರುಕುಳ ಆಗುತ್ತಿದೆ ಎಂದು ಬೆಂಗಳೂರು ಮೂಲದ ವಿದ್ಯಾರ್ಥಿನಿ ಆರೋಪ ಮಾಡಿದ್ದರು. 2023 ರಿಂದ ನಿರಂತರ ಕಿರುಕುಳ ನೀಡುತ್ತಿದ್ದಾರೆ ಎಂದು ಆರೋಪಿಸಿದ್ದರು. ಸದ್ಯ ಈ ಘಟನೆ ತೀವ್ರ ಚರ್ಚೆಗೆ ಗ್ರಾಸವಾಗಿದೆ.

ಚಿಕ್ಕಮಗಳೂರು ಮೆಡಿಕಲ್ ಕಾಲೇಜು ನೋಟಿಸ್‌ನಲ್ಲೇನಿದೆ? ಸಂತ್ರಸ್ತೆಯು ಇನ್‌ಸ್ಟಾಗ್ರಾಂ ಹಾಗೂ ಯೂಟ್ಯೂಬ್‌ನಲ್ಲಿ ನೀಡಿರುವ ಸಂದರ್ಶನದಲ್ಲಿ, ಡಾ.ಗಂಗಾಧರ ಅವರು ವಾಟ್ಸ್‌ಆ್ಯಪ್ ಚಾಟ್ ಮೂಲಕ ಅಶ್ಲೀಲ ಸಂದೇಶಗಳನ್ನು ಕಳುಹಿಸಿರುವ ಬಗ್ಗೆ ಆರೋಪಿಸಿರುತ್ತಾರೆ.

ಕುರಿತು ಲಿಖಿತ ಸಮಜಾಯಿಷಿ ನೀಡಬಬೇಕು ಎಂದು ಶೋಕಾಸ್ ನೋಟಿಸ್‌ನಲ್ಲಿ ಸೂಚನೆ ನೀಡಲಾಗಿದೆ. ಸಾಮಾಜಿಕ ಜಾಲತಾಣಗಳಾದ ಇನ್‌ಸ್ಟಾಗ್ರಾಂ ಹಾಗೂ ಯೂಟ್ಯೂಬ್‌ನಲ್ಲಿ ಸಂತ್ರಸ್ತೆಯು ನೀಡಿರುವ ಸಂದರ್ಶನದಲ್ಲಿ ನೀವು ವಿದ್ಯಾರ್ಥಿನಿಯೊಡನೆ ಅನುಚಿತ ವಾಟ್ಸ್‌ಆ್ಯಪ್ ಚಾಟ್ ನಡೆಸಿರುವ ಬಗ್ಗೆ ಹೇಳಿಕೆ ನೀಡಿರುವುದು ಸಾಮಾಜಿಕ ಜಾಲತಾಣದಲ್ಲಿ ಹರಿದಾಡುತ್ತಿರುತ್ತದೆ. ಈ ವಾಟ್ಸ್ ಆ್ಯಪ್ ಚಾಟ್ ಕುರಿತಂತೆ ತಮ್ಮ ಬಗ್ಗೆ ನೀಡಿರುವ ಹೇಳಿಕೆಗಳ ಕುರಿತು ಈ ನೋಟೀಸ್ ತಲುಪಿದ ಕೂಡಲೇ ಲಿಖಿತ ಸಮಜಾಯಿಷಿಯನ್ನು ನೀಡಲು ಸೂಚಿಸಿದೆ. ತಪ್ಪಿದ್ದಲ್ಲಿ ತಮ್ಮ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಲು ಮೇಲಾಧಿಕಾರಿಗಳಿಗೆ ಶಿಫಾರಸ್ಸು ಮಾಡಲಾಗುವುದು ಎಂದು ಗಂಗಾಧರ್ ಅವರಿಗೆ ನೀಡಿದ ನೋಟಿಸ್‌ನಲ್ಲಿ ಡೀನ್ ಉಲ್ಲೇಖಿಸಿದ್ದಾರೆ.

## ರಸ್ತೆಗುಂಡಿ ತಪ್ಪಿಸಲು ಹೋಗಿ ಆನೇಕಲ್ ಬಳಿ ಕೆರೆಗೆ ಬಿದ್ದ ಲಾರಿ



ಆನೇಕಲ್: ರಸ್ತೆ ಗುಂಡಿ ತಪ್ಪಿಸಲು ಹೋದ ವೇಳೆ ಚಾಲಕನ ನಿಯಂತ್ರಣ ತಪ್ಪಿ ಲಾರಿ ಕೆರೆಗೆ ಬಿದ್ದ ಘಟನೆ ಆನೇಕಲ್‌ನ ಅತ್ತಿಬೆಲೆ-ಸರ್ಜಾಪುರ ಮುಖ್ಯರಸ್ತೆಯ ಬಿದರಗುಪ್ಪೆ ಬಳಿ ನಡೆದಿದೆ. ಘಟನೆಯಲ್ಲಿ ಕಲಬುರಗಿ ಮೂಲದ ಲಾರಿ ಚಾಲಕ ಮಹೇಶ್ (37) ಸಾವನ್ನಪ್ಪಿದ್ದಾರೆ. ಕ್ರೇನ್ ಸಹಾಯದಿಂದ ಲಾರಿ ಮತ್ತು ಚಾಲಕನ ಮೃತ ದೇಹವನ್ನು ಕೆರೆಯಿಂದ ಹೊರ ತೆಗೆಯಲಾಗಿದೆ. ಜಲ್ಲಿ ತುಂಬಿಕೊಂಡು ಅತ್ತಿಬೆಲೆಯಿಂದ ಸರ್ಜಾಪುರ ಮಾರ್ಗವಾಗಿ 12 ಚಕ್ರದ ಲಾರಿ ತೆರಳುತ್ತಿರುವ ವೇಳೆ ಚಾಲಕ ಮಹೇಶ್ ರಸ್ತೆಗುಂಡಿ ತಪ್ಪಿಸಲು ಹೋಗಿದ್ದಾರೆ.

ಈ ವೇಳೆ ಲಾರಿ ನಿಯಂತ್ರಣ ಕಳೆದುಕೊಂಡಿದ್ದು, ಚಾಲಕನ ಸಮೇತವಾಗಿ ರಸ್ತೆ ಪಕ್ಕದ ಕೆರೆಗೆ ಉರುಳಿದೆ. ಕೆರೆ ಏರಿಮೇಲಿರುವ ರಸ್ತೆ ಬಹಳ ಕಿರಿದಾಗಿರುವ ಜೊತೆಗೆ, ರಸ್ತೆಯ ಅವ್ಯವಸ್ಥೆಯೇ ಅಪಘಾತಕ್ಕೆ ಕಾರಣ ಎಂಬ ಆರೋಪ ಕೇಳಿಬಂದಿದೆ. RNS ಕಂಪನಿಗೆ ರಸ್ತೆ ಅಭಿವೃದ್ಧಿಯ ಟೆಂಡರ್ ನೀಡಲಾಗಿದ್ದು, ಕಂಪನಿ ಕೆರೆ ಏರಿ ಮೇಲಿನ ರಸ್ತೆ ವಿಸ್ತರಣೆ ಮಾಡದೆ ಹಾಗೇ ಬಿಟ್ಟಿದೆ.

ಜೊತೆಗೆ ಇರುವ ಕಿರಿದಾದ ರಸ್ತೆಯೂ ಹೊಂಡಗಳಿಂದ ಕೂಡಿದೆ ಎಂದು ಸ್ಥಳೀಯರು ದೂರಿದ್ದಾರೆ. ಎರಡು ಕ್ರೇನ್‌ಗಳನ್ನ ಬಳಸಿ ಕೆರೆಯಲ್ಲಿ ಮುಳುಗಿದ್ದ ಲಾರಿ ಮತ್ತು ಚಾಲಕನ ಮೃತ ದೇಹ ಹೊರಕ್ಕೆ ತೆಗೆಯಲಾಗಿದೆ. SDRF, ಅಗ್ನಿಶಾಮಕ ತಂಡ, ಪೊಲೀಸರ ಸಹಯೋಗದಲ್ಲಿ ಕಾರ್ಯಾಚರಣೆ ನಡೆಸಲಾಗಿದ್ದು, ಮೃತ ದೇಹವನ್ನ ಅತ್ತಿಬೆಲೆಯ ಆಕ್ಸ್‌ಫರ್ಡ್ ಆಸ್ಪತ್ರೆಗೆ ರವಾನಿಸಲಾಗಿದೆ. ಕಳೆದ ವರ್ಷ ನಡೆದಿತ್ತು ಬಸ್ ಅಪಘಾತ

ಅತ್ತಿಬೆಲೆ-ಸರ್ಜಾಪುರ ಮುಖ್ಯರಸ್ತೆಯ ಬಿದರಗುಪ್ಪೆಯ ಕೆರೆ ಏರಿ ಬಳಿ ಕಿರಿದಾದ ರಸ್ತೆಯಿಂದಾಗಿ ಅಪಘಾತಗಳು ಮೇಲಿಂದ ಮೇಲೆ ನಡೆಯುತ್ತಲೇ ಇವೆ. ಕಳೆದ ಒಂದು ವರ್ಷದ ಹಿಂದೆಯೂ ಇಲ್ಲಿ ಅಪಘಾತ ನಡೆದಿತ್ತು. ಕೆರೆಯ ಏರಿಯ ಪಕ್ಕದ ಗುಂಡಿಗೆ ಬಸ್ ಉರುಳಿ ಬಿದ್ದು, 18 ಜನ ಓಂಶಕ್ತಿ ಮಾಲಾಧಾರಿಗಳು ಗಾಯಗೊಂಡಿದ್ದರು. ಆದರೆ ಯಾವುದೇ ಪ್ರಾಣಹಾನಿ ಆಗಿರಲಿಲ್ಲ. ಈಗ ಮತ್ತೊಂದು ಅಂತಹುದೇ ಅವಘಡ ಸಂಭವಿಸಿದ್ದು ಓರ್ವನ ಸಾವಾಗಿದೆ ಎಂಬುದು ಸ್ಥಳೀಯರ ಮಾತು.

## ಕನ್ನಡಿಗರು ಕಾನೂನನ್ನು ರೂಪಿಸಿ ನೀತಿ ಯೋಜನೆ ಜಾರಿಗೆ ತರಬೇಕು: ಚೇತನ್ ಅಹಿಂಸಾ

**ನೆಲಮಂಗಲ** : ಪಟ್ಟಣದ ಶ್ರೀ ಪವಾಡ ಬಸವಣ್ಣ ದೇವರ ಮಠದ ಆವರಣದಲ್ಲಿ ಕರ್ನಾಟಕ ರಣಧೀರರ ವೇದಿಕೆಯ 6ನೇ ವರ್ಷದ ವೈಭವ ಕನ್ನಡ ರಾಜ್ಯೋತ್ಸವ ಹಾಗೂ ತಾಯಿ ಭುವನೇಶ್ವರಿಯ ಹಬ್ಬ ಮತ್ತು ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಸಾಧಕರಿಗೆ 2025 ರ ಹೊಯ್ಸಳ ವಿಶಿಷ್ಟ ಸೇವಾ ಪ್ರಶಸ್ತಿ ಸಮಾರಂಭವು ನಡೆಯಿತು.

ತಾಯಿ ಭುವನೇಶ್ವರಿಯನ್ನು ಬೆಳ್ಳಿ ಪಲ್ಲಕ್ಕಿಯಲ್ಲಿ ಕೂರಿಸಿ ಪಟ್ಟಣದ ರಾಜ ಬೀದಿಗಳಲ್ಲಿ ವಿವಿಧ ಸಾಂಸ್ಕೃತಿಕ ಕಲಾತಂಡಗಳೊಂದಿಗೆ ಮೆರವಣಿಗೆ ಮಾಡಲಾಯಿತು. ನಂತರ ಶ್ರೀ ಪವಾಡ ಬಸವಣ್ಣ ದೇವರ ಮಠದ ಆವರಣದಲ್ಲಿ ವೇದಿಕೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ಈ ಅದ್ದೂರಿ ಕಾರ್ಯಕ್ರಮವನ್ನು ಶ್ರೀ ಪವಾಡ ಬಸವಣ್ಣ ದೇವರ ಮಠದ ಪೀಠಾಧಿಪತಿಗಳಾದ ಶ್ರೀ ಶ್ರೀ ಸಿದ್ದಲಿಂಗ ಮಹಾ ಸ್ವಾಮಿಜಿ, ಕುಂಚಿಟಿಗರ ಮಹಾಸಂಸ್ಥಾನ ಎಲೆರಾಂಪುರ ಮಠದ ಶ್ರೀ ಶ್ರೀ ಹನುಮಂತನಾಥ ಸ್ವಾಮೀಜಿ, ವನಕಲ್ಲು ಮಹಾಸಂಸ್ಥಾನ ಮಠದ ಶ್ರೀ ಶ್ರೀ ಬಸವ ರಮಾನಂದ ಸ್ವಾಮೀಜಿಗಳು ದೀಪ ಬೆಳಗುವ ಮೂಲಕ ವೇದಿಕೆ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.



ಕಾರ್ಯಕ್ರಮದಲ್ಲಿ ವಿಶೇಷ ಆಹ್ವಾನಿತರಾಗಿ ನೆಲಮಂಗಲ ವಿಧಾನಸಭಾ ಕ್ಷೇತ್ರದ ಜನಪ್ರಿಯ ಶಾಸಕರಾದ ಎನ್ ಶ್ರೀನಿವಾಸ್, ಗೃಹ ಸಚಿವ ಡಾ. ಜಿ ಪರಮೇಶ್ವರ್ ಅವರ ವಿಶೇಷ ಕರ್ತವ್ಯಾಧಿಕಾರಿಗಳಾದ ಡಾ.ಕೆ ನಾಗಣ್ಣ, ಖ್ಯಾತ ಚಲನಚಿತ್ರ ನಟ ಹಾಗೂ ಪ್ರಗತಿಪರ ಚಿಂತಕರಾದ ಚೇತನ್ ಅಹಿಂಸಾ ಮತ್ತು ತುಮಕೂರು ಉಪ ವಿಭಾಗಾಧಿಕಾರಿ ಹಾಗೂ ತುಮಕೂರು ವಿಶ್ವವಿದ್ಯಾನಿಲಯದ ಕುಲಸಚಿವರಾದ ನಾಹೀದ ಜಮ್ ಜಮ್ ಉಪಸ್ಥಿತಿಯಲ್ಲಿದ್ದರು.

ಕಾ ರ್ಯ ಕ್ರ ಮ ದ ಪ್ರಾಸ್ತಾವಿಕ ನುಡಿಯನ್ನು ಕರ್ನಾಟಕ ರಣಧೀರರ ವೇದಿಕೆಯ ಸಂಸ್ಥಾಪಕ ರಾಜ್ಯಾಧ್ಯಕ್ಷರಾದ ಕೆ ಆರ್ ಶಂಕರ್ ಗೌಡ್ರು ಸಂಘಟನೆಯ ತತ್ವ ಸಿದ್ಧಾಂತ ಮತ್ತು ಸಂವಿಧಾನದ ಬಗ್ಗೆ, ಕಳೆದ ಐದು ವರ್ಷಗಳಿಂದ ಸಂಘಟನೆ ಯಾವೆಲ್ಲಾ ರೀತಿಯಲ್ಲಿ ಹೋರಾಟಗಳನ್ನು ಮಾಡಿ ಯಶಸ್ವಿಯಾಗಿದೆ ಎಂಬುದನ್ನು ಜೊತೆಗೆ ಮುಂದಿನ ಜನಪರ ಹೋರಾಟಗಳು ನಾಡು ನುಡಿ ನೆಲ ಜಲ ಭಾಷೆಯ ಹೋರಾಟದ ಬಗ್ಗೆ ತಿಳಿಸಿದರು.

ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ ಖ್ಯಾತ ಚಲನಚಿತ್ರ ನಟ ಚೇತನ್ ಅಹಿಂಸಾ : ಕನ್ನಡಿಗರ ಶತ್ರು ಯಾರು..? ಜಾತಿ ಧರ್ಮ ಭಾಷೆ ನಮ್ಮ ಶತ್ರುವಲ್ಲ ನಮ್ಮ ಶತ್ರು ಅಸಮಾನತೆ ಮತ್ತು ಅನ್ಯಾಯದ ವ್ಯವಸ್ಥೆ. ಈ ಅನ್ಯಾಯದ ವ್ಯವಸ್ಥೆಯ ವಿರುದ್ಧ ಕನ್ನಡಿಗರು ಸಮ ಸಮಾಜವನ್ನು ಕಟ್ಟಬೇಕಿದೆ. ಆಗ ಮಾತ್ರ ನಮ್ಮ ರಾಜ್ಯ ಆದರ್ಶ ಕರ್ನಾಟಕವಾಗಲಿದೆ. ಭಾಷೆ, ಶಿಕ್ಷಣ, ಆರೋಗ್ಯ, ಕ್ರೀಡೆಯಲ್ಲಿ ಸಮಾನತೆಯನ್ನು ಕಾಣಬೇಕು. ಆದರ್ಶ ಸಮಾಜ ನ್ಯಾಯಯುತವಾಗಿ ಕಟ್ಟಿದರೆ ಮಾತ್ರ ನಮ್ಮ ರಾಜ್ಯ ಸುಭಿಕ್ಷವಾಗಿರುತ್ತದೆ ಎಂದರು

ಈ ಕಾರ್ಯಕ್ರಮದಲ್ಲಿ ವಿವಿಧ ಕನ್ನಡ ಪರ ಸಂಘಟನೆಗಳ ರಾಜ್ಯಾಧ್ಯಕ್ಷರು ಗಳಾದ ಅಶ್ವತ್ ಟಿ ಮರೀಗೌಡ್ರು, ಕನ್ನಡ ಕನ್ನಡ ಚಳುವಳಿ ಗುರುದೇವ್ ನಾರಾಯಣ್ ಕುಮಾರ್, ಸಾರಿಕ ಶೋಭಾ ವಿನಾಯಕ, ಜ್ಯೋತಿ ಕನ್ನಡತಿ, ಮೋಹನ್ ಗೌಡ, ಪ್ರಸನ್ನ ಗೌಡ, ವಸಂತ್ ಪೂಜಾರಿ, ಕರ್ನಾಟಕ ರಣಧೀರರ ವೇದಿಕೆಯ ನೆಲಮಂಗಲ ತಾಲ್ಲೂಕು ಅಧ್ಯಕ್ಷರಾದ ಮೂರ್ತಿ, ಕೊರಟಗೆರೆ ಘಟಕದ ಮಂಜುಸ್ವಾಮಿ ಎಂ ಎನ್ ಸೇರಿದಂತೆ ಇತರರು ಹಾಜರಿದ್ದರು.

ವಿಶೇಷ ಬಾಕ್ಸ್ ಬಳಸಿ ಸರ್


ಶ್ರೀ ವನಕಲ್ಲು ಮಲ್ಲೇಶ್ವರ ಮಹಾಸಂಸ್ಥಾನ ಮಠದ ಪೀಠಾಧ್ಯಕ್ಷರಾದ ಶ್ರೀ ಶ್ರೀ ಬಸವ ರಮಾನಂದ ಮಹಾ ಸ್ವಾಮಿಜಿಗಳಿಗೆ "ಬಸವ ಶ್ರೀ" ಪ್ರಶಸ್ತಿಯನ್ನು ನೀಡಿ ಗೌರವಿಸಲಾಯಿತು.

ವಿಶೇಷ ಬಾಕ್ಸ್ ಬಳಸಿ ಸರ್

ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಸಾಧಕರಿಗೆ ಪ್ರಶಸ್ತಿ ಪ್ರಧಾನ * ಸಮಾಜ ಸೇವಕರಾದ ಹುಲ್ಲೂರು ಮಂಜುನಾಥ್ ಹೊಸಕೋಟೆ, ಪಬ್ಲಿಕ್ ಟಿವಿಯ ಖ್ಯಾತ ನಿರೂಪಕರಾದ ಅರುಣ್ ಸಿ. ಬಡಿಗೇರ್, ಮತ್ತು ಚಲನಚಿತ್ರ ಬಾಲನಟಿ ಹಾಗೂ ಭರತನಾಟ್ಯ ಕಲಾವಿದೆಯಾದ ಕುಮಾರಿ ಭೈರವಿಗೆ ಕರ್ನಾಟಕ ರಣಧೀರರ ವೇದಿಕೆಯ 2025ರ "ಹೊಯ್ಸಳ ವಿಶಿಷ್ಟ ಸೇವಾ ಪುರಸ್ಕಾರ" ನೀಡಿ ಗೌರವಿಸಲಾಯಿತು. ಜೊತೆಗೆ ಎಸ್ ಎಸ್ ಎಲ್ ಸಿ ಮತ್ತು ಪಿಯುಸಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿ - ವಿದ್ಯಾರ್ಥಿನಿಯರಿಗೆ ಪ್ರತಿಭಾ ಪುರಸ್ಕಾರವನ್ನು ನೀಡಿ ಗೌರವಿಸಲಾಯಿತು.

ಈ ಸಂದರ್ಭದಲ್ಲಿ ಸೂರಜ್, ತಿಮ್ಮಪ್ಪ ಗೌಡ (ಚಿನ್ನು), ದೇವರಾಜ್, ಮಂಜುಸ್ವಾಮಿ ಎಂ ಎನ್, ಲೋಕೇಶ್, ಸಮೀರ್, ರವಿ, ಮುತ್ತುರಾಜ್, ಭೈರವ,ಮಹೇಶ್, ಲೋಕೇಶ್, ಸೇರಿದಂತೆ ನೂರಾರು ಕಾರ್ಯಕರ್ತರು ಹಾಜರಿದ್ದರು.

## ಹೆಣ್ಣು ಮಗು ಜನಿಸಿದ್ದಕ್ಕೆ ಕತ್ತು ಹಿಸುಕಿ ಕೊಂದ ಪಾಪಿ ತಾಯಿ



**ಬೆಳಗಾವಿ:** ತಾಯಿಯೊಬ್ಬಳು ತನ್ನ ನವಜಾತ ಹೆಣ್ಣು ಮಗುವಿನ ಕತ್ತು ಹಿಸುಕಿ ಕೊಂದ ಘಟನೆ ನಡೆದಿದೆ. ರಾಮದುರ್ಗ ತಾಲೂಕಿನ ಹಿರೇಮುಲಂಗಿ ಗ್ರಾಮಕ್ಕೆ ಸೇರಿದ ಅಶ್ವಿನಿ ಹಣಮಂತ ಹಳಕಟ್ಟಿ (28) ಎಂಬ ಮಹಿಳೆ ಈ ಕೃತ್ಯ ಎಸಗಿದ್ದಾಳೆ. ಗಂಡು ಮಗುವಿನ ನಿರೀಕ್ಷೆಯಲ್ಲಿದ್ದ ತಾಯಿ, ನಾಲ್ಕನೇ ಬಾರಿಗೆ ಹೆಣ್ಣು ಮಗು ಜನಿಸಿದ ಹಿನ್ನೆಲೆಯಲ್ಲಿ ಈ ದುರಂತಕ್ಕೆ ಮುಂದಾಗಿದ್ದಾಳೆ ಎಂಬ ಆರೋಪ ಕೇಳಿಬಂದಿದೆ.

ಅಶ್ವಿನಿಗೆ ಈಗಾಗಲೇ ಮೂವರು ಹೆಣ್ಣು ಮಕ್ಕಳು ಇದ್ದರು. ನಾಲ್ಕನೇ ಗರ್ಭಧಾರಣೆಯಲ್ಲಿ ಗಂಡು ಮಗು ಜನಿಸುತ್ತದೆ ಎಂದು ನಿರೀಕ್ಷೆ ಇಟ್ಟುಕೊಂಡಿದ್ದಳು. ಆದರೆ ಅಶ್ವಿನಿಗೆ, ಮತ್ತೆ ಹೆಣ್ಣು ಮಗು ಹುಟ್ಟಿದ್ದು, ಇದರಿಂದ ಕೋಪಗೊಂಡು ಮಗುವಿನ ಕತ್ತು ಹಿಸುಕಿಕೊಂದಿದ್ದಾಳೆ ಎನ್ನಲಾಗಿದೆ.

ಘಟನೆಯ ದಿನ ಬೆಳಿಗ್ಗೆ ಬಾಣಂತಿಯರ ವಾರ್ಡಿನಲ್ಲಿ ಕೆಲಕಾಲ ಯಾರೂ ಇರದ ಸಂದರ್ಭದಲ್ಲಿ ಈ ಘಟನೆ ನಡೆದಿದೆ ಎನ್ನಲಾಗಿದೆ. ಅಶ್ವಿನಿ ಒಬ್ಬಳೇ ಇದ್ದ ವೇಳೆ ಈ ಕೃತ್ಯ ಎಸಗಿದ್ದಾಳೆ.

ಹೆತ್ತ ಮಗಳನ್ನೇ ಕೊಂದ ಪಾಪಿ ತಾಯಿ

ಹಾಸನ ಜಿಲ್ಲೆಯ ಚನ್ನರಾಯಪಟ್ಟಣ ತಾಲೂಕಿನ ಜಿನ್ನೇನಹಳ್ಳಿಕೊಪ್ಪಲು ಗ್ರಾಮದಲ್ಲಿ ತಾಯಿಯೊಬ್ಬಳು ತಾನು ಹೆತ್ತ 6 ವರ್ಷದ ಮಗಳನ್ನೇ ನೀರಿನಲ್ಲಿ ಮುಳುಗಿಸಿ ಕೊಲೆ ಮಾಡಿದ ಆಘಾತಕಾರಿ ಘಟನೆ ನಡೆದಿದೆ. ಶ್ವೇತಾ ಎಂಬ ಮಹಿಳೆಯು ತನ್ನ ಮಗಳಾದ ಸಾನ್ವಿಯನ್ನು ಕೊಂದ ಆರೋಪ ಕೇಳಿಬಂದಿದೆ.

**ಘಟನೆಯ ವಿವರ**

ಶನಿವಾರ ಬೆಂಗಳೂರಿನಿಂದ ತನ್ನ ತವರು ಮನೆಗೆ 6 ವರ್ಷದ ಮಗಳು ಸಾನ್ವಿಯನ್ನು ಕರೆತಂದಿದ್ದ ಶ್ವೇತಾ, ಭಾನುವಾರ ಬೆಳಿಗ್ಗೆ ಗ್ರಾಮದ ಕಟ್ಟೆಯ ಕಡೆಗೆ ಹೋಗುವುದಾಗಿ ಮಗುವನ್ನು ಕರೆದೊಯ್ದಿದ್ದಳು. ಆದರೆ, ಜಮೀನಿನ ಬಳಿಯ ನೀರಿನಲ್ಲಿ ಮಗಳನ್ನು ಮುಳುಗಿಸಿ ಕೊಲೆಗೆ ಯತ್ನಿಸಿದ್ದಾಳೆ ಎನ್ನಲಾಗಿದೆ. ಮಗುವಿನ ಕೂಗಾಟ ಕೇಳಿ ಸಮೀಪದ ಜಮೀನಿನಲ್ಲಿ ಕೆಲಸ ಮಾಡುತ್ತಿದ್ದ ರೈತರು ಓಡಿಬಂದು ಮಗುವನ್ನು ರಕ್ಷಿಸಲು ಪ್ರಯತ್ನಿಸಿದರು. ಆದರೆ, ತೀವ್ರ ಅಸ್ವಸ್ಥಗೊಂಡಿದ್ದ ಸಾನ್ವಿಯನ್ನು ಆಸ್ಪತ್ರೆಗೆ ಕರೆತಂದರೂ ಚಿಕಿತ್ಸೆ ಫಲಕಾರಿಯಾಗದೆ, ಬಾಲಕಿ ಸಾವನ್ನಪ್ಪಿದ್ದಾಳೆ. ಶ್ವೇತಾ ಏಳು ವರ್ಷಗಳ ಹಿಂದೆ ಶಿವಮೊಗ್ಗ ಮೂಲದ ರಘು ಎಂಬಾತನನ್ನು ವಿವಾಹವಾದಳು.

ಆದರೆ, ಮದುವೆಯಾದ ಎರಡು ವರ್ಷಗಳಲ್ಲೇ ದಂಪತಿಗಳ ನಡುವೆ ಜಗಳ ಶುರುವಾಯಿತು. ಕಳೆದ ನಾಲ್ಕು ವರ್ಷಗಳಿಂದ ಶ್ವೇತಾ ತನ್ನ ಪತಿಯಿಂದ ದೂರವಾಗಿದ್ದಳು. ವಿಚ್ಛೇದನಕ್ಕಾಗಿ ಅರ್ಜಿ ಸಲ್ಲಿಸಿದ್ದ ಶ್ವೇತಾ, ಮಗಳ ಆರೈಕೆಯ ಜವಾಬ್ದಾರಿಯನ್ನು ರಘುವಿನ ಪೋಷಕರಿಗೆ ವಹಿಸಲಾಗಿತ್ತು. ಆದರೆ, ಶನಿವಾರ ಶ್ವೇತಾ ಸಾನ್ವಿಯನ್ನು ಕರೆದುಕೊಂಡು ತವರು ಮನೆಗೆ ಬಂದಿದ್ದಳು.

ಮಗಳ ಕೊಲೆಗೆ ಯತ್ನಿಸಿದ ಶ್ವೇತಾ, ರಕ್ಷಣೆಗೆ ಓಡಿಬಂದ ಗ್ರಾಮಸ್ಥರ ಮುಂದೆ, "ನಾನು ಮತ್ತು ಮಗು ಇಬ್ಬರೂ ಸಾಯಲು ಪ್ರಯತ್ನಿಸಿದ್ದೆವು" ಎಂದು ಹೇಳಿಕೊಂಡಿದ್ದಾಳೆ. ಆದರೆ, ಗ್ರಾಮಸ್ಥರು ತಕ್ಷಣವೇ ಮಗುವನ್ನು ಆಸ್ಪತ್ರೆಗೆ ಕರೆತಂದರೂ, ಸಾನ್ವಿಯ ಪ್ರಾಣ ಉಳಿಯಲಿಲ್ಲ. ಸಾನ್ವಿಯ ಸಾವಿನ ಸುದ್ದಿ ಕೇಳಿ ತಂದೆ ರಘು ಮತ್ತು ಕುಟುಂಬಸ್ಥರು ಶವಾಗಾರಕ್ಕೆ ಧಾವಿಸಿದರು. ರಘು ತನ್ನ ಮಗಳ ಸಾವಿನಿಂದ ಕಣ್ಣೀರಿಟ್ಟಿದ್ದಾರೆ.

ಶವಾಗಾರದ ಬಳಿ ಶ್ವೇತಾ ಮತ್ತು ರಘುವಿನ ಕುಟುಂಬಸ್ಥರ ನಡುವೆ ತೀವ್ರ ಗಲಾಟೆ ನಡೆಯಿತು. ಎರಡೂ ಕಡೆಯ ಸಂಬಂಧಿಕರು ಪರಸ್ಪರ ಜಗಳವಾಡಿ, ಬಡಿದಾಡಿಕೊಂಡರು. ಈ ಸಂದರ್ಭದಲ್ಲಿ ಹಿರಿಸಾವೆ ಠಾಣೆಯ ಪಿಎಸ್‌ಐ ರೂಪಾ ಬಿರಾದಾರ್ ಪರಿಸ್ಥಿತಿಯನ್ನು ನಿಯಂತ್ರಣಕ್ಕೆ ತಂದರು. ಈ ಘಟನೆಗೆ ಸಂಬಂಧಿಸಿದಂತೆ ಹಿರಿಸಾವೆ ಠಾಣೆಯಲ್ಲಿ ದೂರು ದಾಖಲಾಗಿದ್ದು, ತನಿಖೆ ಆರಂಭವಾಗಿದೆ.

## ಶ್ರೀ ಗಂಗಮ್ಮದೇವಿ ಕುರಿ ಮತ್ತು ಮೇಕೆ ಸಾಕಾಣಿಕೆದಾರರ ಸಂಘದ ನೂತನ ಆಡಳಿತ ಮಂಡಳಿ



ಅವಿರೋಧವಾಗಿ ಆಯ್ಕೆಯಾದ ಅಧ್ಯಕ್ಷ, ಉಪಾಧ್ಯಕ್ಷರ ಅಧಿಕಾರ ಸ್ವೀಕಾರ.

ಕುಮಾರಸ್ವಾಮಿ ಬಿ .ಸಿ (ಅಧ್ಯಕ್ಷರು) ಮಹಾಲಕ್ಷ್ಮಿ (ಉಪಾಧ್ಯಕ್ಷರು) ಇತರೆ ನಿರ್ದೇಶಕರು: ಮೃತ್ಯುಂಜಯ, ಬಿ ಹೆಚ್ ಮಹೇಶ್, ನಾಗರಾಜು ಎಂ ವಿ, ಮುತ್ತುರಾಜ, ರೇಣುಕಮ್ಮ, ಸಿದ್ದಲಿಂಗಯ್ಯ ಎಂ ಇ, ವೀರ ಭದ್ರಯ್ಯ, ಪಾರ್ವತಮ್ಮ, ಎಂ ಜಿ ರಂಗನಾಥ, ಕುಮಾರ, ಸುವರ್ಣ.

**ಮೋ ಟ ಗಾ ನ ಹ ಳ್ಳಿ ಸಹಕಾರ ಸಂಘದ ಮಾಜಿ ಅಧ್ಯಕ್ಷರು: ಸುರೇಶ್.ಮೋಟಗಾನಹಳ್ಳಿ ಗ್ರಾಮ ಪಂಚಾ ಯಿತಿ ಉಪಾ ಧ್ಯಕ್ಷರು: ರಂಗ ನಾಥ್. ಮೋಟಗನಹಳ್ಳಿ ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷರು (ಹಾಲಿ ಸದಸ್ಯರು): ಕಮಲಮ್ಮ ಪರಮೇಶ್ವರ್.**

**ಗ್ರಾಮ ಪಂಚಾಯಿತಿ ಮಾಜಿ ಉಪಾಧ್ಯಕ್ಷರು: ಈರಪ್ಪ ಮುತ್ತುರಾಜ್. ಮೋಟಗನಹಳ್ಳಿ ಹಾಲು ಉತ್ಪಾದಕರ ಸಹಕಾರ ಸಂಘದ ಅಧ್ಯಕ್ಷರು: ವೀರಭದ್ರಯ್ಯ. ಮೋಟಗನಹಳ್ಳಿ ಹಾಲು ಉತ್ಪಾದಕರ ಸಹಕಾರ ಸಂಘದ ಮಾಜಿ ಉಪಾಧ್ಯಕ್ಷರು: ಮುತ್ತುರಾಜು. ಇತರ ಯುವಕರು, ಸದಸ್ಯರು, ನಿರ್ದೇಶಕರು ಮತ್ತು ಅಧಿಕಾರಿಗಳು.**

ಹೊಸ ಪದಾಧಿಕಾರಿಗಳ ನೇತೃತ್ವದಲ್ಲಿ ಸಂಘವು ಮತ್ತಷ್ಟು ಅಭಿವೃದ್ಧಿ ಕಾಣುವ ನಿರೀಕ್ಷೆ.

ಸಮಾರಂಭಕ್ಕೆ ಸ್ಥಳೀಯ ಜನಪ್ರತಿನಿಧಿಗಳು, ಸಹಕಾರ ಇಲಾಖೆಯ ಅಧಿಕಾರಿಗಳು ಆಗಮಿಸುವ ಸಾಧ್ಯತೆ. ಸದಸ್ಯರು ಮತ್ತು ಗ್ರಾಮಸ್ಥರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಶುಭ ಕೋರುವಂತೆ

## ಸಿಎಂ ಸ್ಥಾನ ಬಿಟ್ಟುಕೊಡುವ ಪ್ರಶ್ನೆ ಬಂದಿಲ್ಲ



ಸಿಎಂ ಖರ್ಚಿ ಬದಲಾವಣೆ ವಿಚಾರವಾಗಿ ದೊಡ್ಡಬಳ್ಳಾಪುರ ತಾಲ್ಲೂಕಿನ ಶ್ರೀ ಕ್ಷೇತ್ರ ಘಾಟಿ ದೇವಸ್ಥಾನ ಬಳಿ ಜಿಲ್ಲಾ ಉಸ್ತುವಾರಿ ಸಚಿವ ಕೆ.ಹೆಚ್. ಮುನಿಯಪ್ಪ ಪ್ರತಿಕ್ರಿಯೆ ನೀಡಿದರು.

ಸಿಎಂ ಸಿದ್ದರಾಮಯ್ಯ ಮುಖ್ಯಮಂತ್ರಿ ಇದ್ದಾರೆ... ಅವರೇ ಮುಂದುವರೆಯುತ್ತೇನೆ ಅಂತ ಹೇಳಿದ್ದಾರೆ. ಮುಂದುವರೆಯಲಿ ಒಳ್ಳೆ ಕೆಲಸ ಮಾಡ್ತಿದ್ದಾರೆ ಅವರೇ ಮುಂದುವರೆಯತ್ತಾರೆ. ಉಪ ಮುಖ್ಯಮಂತ್ರಿಗಳು ಸಹ ಒಳ್ಳೆ ಕೆಲಸ ಮಾಡ್ತಿದ್ದಾರೆ.

ಇದರಲ್ಲಿ ಬದಲಾವಣೆ ವಿಚಾರ ನಮ್ಮ ಮುಂದೆ ಇಲ್ಲವೇ ಇಲ್ಲ. ಅದೇನಿದ್ರು ಹೈಕಮಾಂಡ್ ತೀರ್ಮಾನ ಮಾಡುತ್ತೆ ಹೈಕಮಾಂಡ್ ತೀರ್ಮಾನಕ್ಕೆ ನಾವೆಲ್ಲರೂ ಬದ್ಧರಾಗಿರ್ತೀವಿ ತಕ್ಷಣ ಹೈಕಮಾಂಡ್ ಮಧ್ಯಪ್ರವೇಶ ಮಾಡಿ ಸಮಸ್ಯೆ ಬಗೆಹರಿಸಲಿ ಎಂದರು.

## ಘಾಟಿ ಕ್ಷೇತ್ರ ಅಭಿವೃದ್ಧಿಗೆ 29 ಕೋಟಿ ರೂ.ಗಳ ಆಡಳಿತಾತ್ಮಕ ಅನುಮೋದನೆ



16 ಕೋಟಿ ವೆಚ್ಚದಲ್ಲಿ ದಾಸೋಹ ಭವನ ನಿರ್ಮಾಣ:ಸಚಿವ ರಾಮಲಿಂ ಗಾರೆಡ್ಡಿ

ಡಿಸೆಂಬರ್ 25 ಕ್ಕೆ ಬ್ರಹ್ಮ ರಥೋ ತ್ಸವ

ಶ್ರೀ ಘಾಟಿ ಕ್ಷೇತ್ರದಲ್ಲಿ ಹದಿನಾರು ಕೋಟಿ ರೂ. ವೆಚ್ಚದಲ್ಲಿ 2,000 ಭಕ್ತಾದಿಗಳು ಒಂದೇ ಸಮಯದಲ್ಲಿ ಕುಳಿತು ಊಟ ಮಾಡುವಂತಹ ದಾಸೋಹ ಭವನ ನಿರ್ಮಿಸಲಾಗುವುದು ಎಂದು ಸಾರಿಗೆ ಹಾಗೂ ಮುಜರಾಯಿ ಇಲಾಖೆ ಸಚಿವರಾದ ರಾಮಲಿಂಗಾರೆಡ್ಡಿ ಅವರು ತಿಳಿಸಿದರು.

ಇಂದು ದೊಡ್ಡಬಳ್ಳಾಪುರ ತಾಲ್ಲೂಕಿನ ಶ್ರೀ ಕ್ಷೇತ್ರ ಘಾಟಿ ಸುಬ್ರಮಣ್ಯ ಕ್ಷೇತ್ರ ಸಭಾಂಗಣದಲ್ಲಿ ನಡೆದ ಸಭೆಯನ್ನುದ್ದೇಶಿಸಿ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿ ಘಾಟಿ ಸುಬ್ರಹ್ಮಣ್ಯ ದೇವಾಲಯಕ್ಕೆ ಪ್ರತಿ ವರ್ಷ ಸುಮಾರು 25 ಲಕ್ಷಕ್ಕಿಂತ ಹೆಚ್ಚಿನ ಭಕ್ತರು ಬರುತ್ತಾರೆ. ಸುಸಜ್ಜಿತ ಅನ್ನ ಸಂತರ್ಪಣೆ ಸೌಲಭ್ಯ ಭಕ್ತರಿಗೆ ಒದಗಿಸುವುದು ಮುಖ್ಯ. ಹಾಗಾಗಿ ದಾಸೋಹ ಭವನ ನಿರ್ಮಿಸಲಾಗುತ್ತಿದ್ದು ದಾಸೋಹ ಭವನ ಮುಂಭಾಗವು ಹೊಯ್ಸಳ ಶೈಲಿಯಿಂರ ಕೂಡಿರಲಿದೆ ಎಂದರು.

ರಥೋತ್ಸವ ಸಂದರ್ಭದಲ್ಲಿ ಭಕ್ತಾದಿ ಗಳಿಗೆ ಅನುಕೂಲವಾಗುವಂತೆ ರಥ ಬೀದಿ ನಿರ್ಮಿಸಲಾಗುವುದು. ದೇವಾಲಯದ ಸುತ್ತಲೂ ಕಾಂಕ್ರೀಟ್ ರಸ್ತೆ, ಶೌಚಾಲಯ ವ್ಯವಸ್ಥೆ ಹಾಗೂ ಒಂದೂವರೆ ಕೋಟಿ ವೆಚ್ಚದಲ್ಲಿ ಅತಿಥಿ ಗೃಹವನ್ನು ಅಭಿವೃದ್ಧಿ ಮಾಡಲಾಗುತ್ತದೆ. ರಸ್ತೆ ಅಭಿವೃದ್ಧಿ ಪಡಿಸಲಾಗುವುದು. ಮುಂದಿನ ದಿನಗಳಲ್ಲಿ ಶುದ್ಧ ತುಪ್ಪದಿಂದ ಮಾಡಿದ ಲಡ್ಡುವನ್ನು ಪ್ರಸಾದವಾಗಿ ವಿತರಿಸಲು ಕ್ರಮ ಕೈಗೊಳ್ಳಲಾಗುವುದು. ಒಟ್ಟಾರೆ ಇಂದು ನಡೆದ ಸಭೆಯಲ್ಲಿ 29 ಕೋಟಿ ವೆಚ್ಚದ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಕೈಗೊಳ್ಳಲು ಸಭೆಯಲ್ಲಿ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ ಎಂದರು.

ಡಿಸೆಂಬರ್ 25 ಕ್ಕೆ ಬ್ರಹ್ಮ ರಥೋತ್ಸವ ಶ್ರೀ ಘಾಟಿ ಸುಬ್ರಮಣ್ಯರವರ ಬ್ರಹ್ಮರಥೋತ್ಸವ ಡಿಸೆಂಬರ್ 25 ರಂದು ನಡೆಯಲಿದೆ. ಈ ಬಾರಿ ವಿಶೇಷವಾಗಿ ಪುಷ್ಪಲಂಕಾರ ದೀಪ ಅಲಂಕಾರಗಳಿರುತ್ತದೆ. ಭಕ್ತಾದಿಗಳ ಅನುಕೂಲಕ್ಕೆ ಕುಡಿಯುವ ನೀರಿನ ವ್ಯವಸ್ಥೆ, ಕ್ಯೂಲೈನ್ ವ್ಯವಸ್ಥೆ ತಾತ್ಕಾಲಿಕ ಶೌಚಾಲಯ ವ್ಯವಸ್ಥೆ ಮಾಡಲಾಗುವುದು.

ಸುಂಕ ರಹಿತ ಜಾತ್ರೆ

ಈ ಬಾರಿಯ ಘಾಟಿ ಜಾತ್ರೆಯಲ್ಲಿ ಜಾನುವಾರುಗಳಿಗೆ ಹಾಗೂ ಬರುವಂತಹ ಭಕ್ತಾದಿಗಳ ವಾಹನಗಳಿಗೆ ಸುಂಕ ಇರುವುದಿಲ್ಲ. ಹಿರಿಯ ನಾಗರಿಕರಿಗೆ, ವಿಶೇಷ ಚೇತನರಿಗೆ, ಗರ್ಭಿಣಿ ಬಾಣಂತಿಯರಿಗೆ ನೇರವಾಗಿ ದರ್ಶನಕ್ಕೆ ಅವಕಾಶ ಕಲ್ಪಿಸಲಾಗುವುದು.

ಡಿ.10 ರಿಂದ 18 ವರೆಗೆ ರಾಸುಗಳ ಜಾತ್ರೆ, ಡಿಸೆಂಬರ್ 10 ರಿಂದ 18 ರವರೆಗೆ ರಾಸುಗಳ ಜಾತ್ರೆ, ನಡೆಯಲಿದೆ ರಾಸುಗಳ ಜಾತ್ರೆ, ಸಮಯದಲ್ಲಿ ವಿಶೇಷ ದೀಪಾಲಂಕಾರ, ರೈತರಿಗೆ ಮತ್ತು ರಾಸುಗಳಿಗೆ ಕುಡಿಯುವ ನೀರಿನ ವ್ಯವಸ್ಥೆ, ರಾಸುಗಳಿಗೆ ರೋಗಗಳು ಹರಡದಂತೆ ಪಶು ವೈದ್ಯರ ವ್ಯವಸ್ಥೆ ಕಲ್ಪಿಸಲಾಗುವುದು. ರಾಸುಗಳ ಜಾತ್ರೆಗೆ ಆಗಮಿಸುವ ರೈತರಿಗೆ ತಿಂಡಿ ಮತ್ತು ಊಟದ ವ್ಯವಸ್ಥೆಯನ್ನು ದೇವಾಲಯದ ವತಿಯಿಂದ ಕಲ್ಪಿಸಲಾಗುವುದು ಎಂದರು.

ಜಿಲ್ಲಾ ಉಸ್ತುವಾರಿ ಸಚಿವರಾದ ಕೆ.ಹೆಚ್ ಮುನಿಯಪ್ಪ ಅವರು ಮಾತನಾಡಿ ಘಾಟಿ ಕ್ಷೇತ್ರ ಅಭಿವೃದ್ಧಿಗೆ ಪ್ರಾಧಿಕಾರ ರಚಿಸಲಾಗಿದೆ. ಕ್ಷೇತ್ರ ಅಭಿವೃದ್ಧಿಗೆ 100 ಎಕರೆ ಜಾಗದ ಅವಶ್ಯಕತೆ ಇದೆ. ಸದ್ಯಕ್ಕೆ 50 ಎಕರೆ ಜಾಗ ಬೇಕಾಗಿದ್ದು 20 ಎಕರೆ ಸರ್ಕಾರಿ ಜಮೀನು ಇದ್ದು , ಇನ್ನು 30 ಎಕರೆ ಜಾಗ ಹುಡುಕಲು ಅಧಿಕಾರಿಗಳಿಗೆ ತಿಳಿಸಿದ್ದೇನೆ.

ಘಾಟಿ ಕ್ಷೇತ್ರದಲ್ಲಿ ಸುಸಜ್ಜಿತ ಅನ್ನಸಂತರ್ಪಣೆ ಕಟ್ಟಡ, ಮಾಕಳಿಯಿಂದ ಕಂಟನಕುಂಟೆ ಮಾರ್ಗವಾಗಿ ಘಾಟಿಯ ವರೆಗೆ ರಸ್ತೆ ಅಭಿವೃದ್ಧಿ , ಅತಿಥಿ ಗೃಹ ಸೇರಿದಂತೆ ವಿವಿಧ ಅಭಿವೃದ್ಧಿ ಕಾಮಗಾರಿಗಳನ್ನು ಶೀಘ್ರದಲ್ಲೇ ಆರಂಭಿಸಲಾಗುವುದು. ಭಕ್ತಾದಿಗಳ ಹಿತ ದೃಷ್ಟಿಯಿಂದ ಸುಂಕ ರಹಿತ ಜಾತ್ರೆ ಮಾಡಲು ಸಭೆಯಲ್ಲಿ ತೀರ್ಮಾನಿಸಲಾಗಿದೆ ಎಂದರು.


ಸಭೆಯಲ್ಲಿ ಮುಜರಾಯಿ ಇಲಾಖೆ ಆಯುಕ್ತರಾದ ಶರತ್, ಜಿಲ್ಲಾಧಿಕಾರಿ ಎಬಿ ಬಸವರಾಜು, ಎಡಿಸಿ ಸೈಯಿದಾ ಆಯಿಷಾ, ಘಾಟಿ ಅಭಿವೃದ್ಧಿ ಪ್ರಾಧಿಕಾರದ ಕಾರ್ಯದರ್ಶಿ ದಿನೇಶ್, ಜಿಲ್ಲಾ ಗ್ಯಾರಂಟಿ ಯೋಜನೆ ಅನುಷ್ಠಾನ ಪ್ರಾಧಿಕಾರದ ಜಿಲ್ಲಾಧ್ಯಕ್ಷ ರಾಜಣ್ಣ, ತಾಲ್ಲೂಕು ಅಧ್ಯಕ್ಷರಾದ ಜಗನ್ನಾಥ, ಶ್ರೀ ಘಾಟಿ ಸುಬ್ರಮಣ್ಯ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷರು, ಸಮಿತಿ ಸದಸ್ಯರು, ಸೇರಿದಂತೆ ಸ್ಥಳೀಯ ಜನಪ್ರತಿನಿಧಿಗಳು ಅಧಿಕಾರಿಗಳು ಉಪಸ್ಥಿತರಿದ್ದರು.

## ಚೆನ್ನೈ ಎಕ್ಸ್‌ಪ್ರೆಸ್‌ವೇಯಲ್ಲಿ ಬ್ರಿಡ್ಜ್‌ನಿಂದ ಕೆಳಗುರುಳಿದ ಕಾರು

**ಕೋಲಾರ:** ಬೆಂಗಳೂರು - ಚೆನ್ನೈ ಎಕ್ಸ್‌ಪ್ರೆಸ್ ಹೈವೇಯಲ್ಲಿ ಕಾರು ಡಿವೈಡರ್‌ಗೆ ಡಿಕ್ಕಿಯಾಗಿ ಸೇತುವೆಯಿಂದ ಕೆಳಗೆ ಬಿದ್ದ ಪರಿಣಾಮ ನಾಲ್ವರು ಸಾವನ್ನಪ್ಪಿದ ಘಟನೆ ಮಾಲೂರು ತಾಲೂಕಿನ ಅಬ್ಬೇನಹಳ್ಳಿ ಬಳಿ ನಡೆದಿದೆ. ಮೃತರನ್ನು ಚನ್ನೈ ಮೂಲದ ಗೋಪಿ (38), ಗೌತಮ್ ರಮೇಶ್ (28), ಹರಿಹರನ್ (27), ಜಯಂಕರ್ (30) ಎಂದು ಗುರುತಿಸಲಾಗಿದೆ. ಅಪಘಾತದಲ್ಲಿ ತೀವ್ರವಾಗಿ ಗಾಯಗೊಂಡಿದ್ದ ಯುವಕರನ್ನು ಕೋಲಾರದ ಅರ್ ಎಲ್ ಜಾಲಪ್ಪ ಆಸ್ಪತ್ರೆಗೆ ಚಿಕಿತ್ಸೆಗೆ ಸಾಗಿಸಲಾಗಿತ್ತು. ಆದರೆ ಚಿಕಿತ್ಸೆ ಫಲಿಸದೇ ಯುವಕರು ಸಾವನ್ನಪ್ಪಿದ್ದಾರೆ.ಈ ಸಂಬಂಧ ಮಾಲೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.

# ಭ್ರಷ್ಟ ಅಧಿಕಾರಿಗಳಿಗೆ ಶಾಕ್ ರಾಜ್ಯದ 10 ಕಡೆ ಏಕಕಾಲಕ್ಕೆ 'ಲೋಕಾ' ದಾಳಿ




**ಬೆಂಗಳೂರು:** ರಾಜ್ಯದ ಭ್ರಷ್ಟ ಅಧಿಕಾರಿಗಳಿಗೆ ಇಂದು ಬೆಳಗ್ಗೆಯೇ ಭಾರೀ ಶಾಕ್ ಎದುರಾಗಿದೆ. ಆದಾಯ ಮೀರಿ ಆಸ್ತಿ ಗಳಿಕೆ (DA) ಪ್ರಕರಣಗಳ ಹಿನ್ನೆಲೆ, ಲೋಕಾಯುಕ್ತ ಪೊಲೀಸರು ಇಂದು ಬೆಳಗ್ಗೆ ರಾಜ್ಯದ 10ಕ್ಕೂ ಹೆಚ್ಚು ಸ್ಥಳಗಳಲ್ಲಿ ಏಕಕಾಲಕ್ಕೆ ದಾಳಿ ನಡೆಸಿದ್ದಾರೆ. ಈ ದಾಳಿಯು ಬೆಂಗಳೂರು, ಮಂಡ್ಯ, ಬೀದರ್, ಮೈಸೂರು, ಧಾರವಾಡ ಮತ್ತು ಶಿವಮೊಗ್ಗ ಸೇರಿದಂತೆ ಹತ್ತು ಸ್ಥಳಗಳಲ್ಲಿ ನಡೆದಿದೆ.

ಲೋಕಾಯುಕ್ತ ಪೊಲೀಸರು ನಿದ್ದೆಯಲ್ಲಿದ್ದ ಅಧಿಕಾರಿಗಳ ಮನೆಗಳು ಮತ್ತು ಕಚೇರಿಗಳ ಮೇಲೆ ದಾಳಿ ನಡೆಸಿದ್ದಾರೆ. ಈ ಕಾರ್ಯಾಚರಣೆಯು ಯೋಜಿತವಾಗಿ ನಡೆದಿದೆ.

ದಾವಣಗೆರೆಯ ಎಪಿಎಂಸಿ ಸಹಾಯಕ ನಿರ್ದೇಶಕ ಜೆ. ಪ್ರಭು ಅವರ ಮೇಲೆ ಮೊದಲ ದಾಳಿ ನಡೆಯಿತು. ಅವರ ಮನೆಯಲ್ಲಿ ದಾಖಲೆಗಳು, ನಗದು ಮತ್ತು ಆಸ್ತಿ ಸಂಬಂಧಿತ ದಾಖಲೆಗಳನ್ನು ಪರಿಶೀಲಿಸಲಾಯಿತು. ಮಂಡ್ಯದಲ್ಲಿ ನಗರ ಪಾಲಿಕೆಯ ಮುಖ್ಯ ಆಡಳಿತಾಧಿಕಾರಿ (ಸಿಎಓ) ಪುಟ್ಟಸ್ವಾಮಿ ಅವರ ಮೇಲೆ ದಾಳಿ ನಡೆಯಿತು. ನಗರಾಭಿವೃದ್ಧಿ ಯೋಜನೆಗಳಲ್ಲಿ ಭ್ರಷ್ಟಾಚಾರ ಮಾಡಿದ್ದರು ಎಂಬ ದೂರುಗಳು ಬಂದಿದ್ದವು. ಅವರ ಕಚೇರಿಯಲ್ಲಿ ಹಲವು ಫೈಲ್‌ಗಳನ್ನು ವಶಪಡಿಸಿಕೊಳ್ಳಲಾಯಿತು.

ಬೀದರ್‌ನಲ್ಲಿ ಕೃಷ್ಣಾ ಮೇಲ್ದಂಡೆ ಯೋಜನೆಯ ಮುಖ್ಯ ಇಂಜಿನಿಯರ್ ಪ್ರೇಮ್ ಸಿಂಗ್ ಅವರ ಮನೆ ಮತ್ತು ಕಚೇರಿಯ ಮೇಲೆ ದಾಳಿ ನಡೆದಿದೆ. ನೀರಾವರಿ ಯೋಜನೆಗಳಲ್ಲಿ ಅಕ್ರಮ ಹಣ ವರ್ಗಾವಣೆ ಮಾಡಿದ್ದರು ಎಂಬ ಆರೋಪವಿದೆ.

ಮೈಸೂರಿನ ಹೂಟಗಳ್ಳಿ ನಗರ ಪಾಲಿಕೆಯ ಆದಾಯ ಇನ್‌ಸ್ಪೆಕ್ಟರ್ ಸಿ. ರಾಮಸ್ವಾಮಿ ಅವರ ಮೇಲೆ ದಾಳಿ ನಡೆಯಿತು. ಆಸ್ತಿ ತೆರಿಗೆ ಸಂಗ್ರಹದಲ್ಲಿ ಅಕ್ರಮಗಳು ನಡೆದಿರುವುದು ಬಯಲಾಗಿದೆ. ಧಾರವಾಡದಲ್ಲಿ ಕರ್ನಾಟಕ ವಿಶ್ವವಿದ್ಯಾಲಯದ ಸಹಾಯಕ ಪ್ರಾಧ್ಯಾಪಕ ಸುಭಾಶ್ ಚಂದ್ರ ಅವರ ಮೇಲೆ ದಾಳಿ ನಡೆಯಿತು. ಹಣಕಾಸು ದುರುಪಯೋಗದ ಆರೋಪಗಳು ಅವರ ಮೇಲಿವೆ. ಧಾರವಾಡದ ಪ್ರಾಥಮಿಕ ಪಶು ಕ್ಲಿನಿಕ್ ಹುಲಿಗೋಲ್‌ನ ಹಿರಿಯ ಪರೀಕ್ಷಕ ಸತೀಶ್ ಅವರ ನಿವಾಸದ ಮೇಲೂ ದಾಳಿ ನಡೆದಿದೆ.

ಶಿವಮೊಗ್ಗದ ಎಸ್‌ಐಎಂಎಸ್ ಮೆಡಿಕಲ್ ಕಾಲೇಜ್‌ನ ಎಫ್‌ಡಿಎ ಲಕ್ಷ್ಮೀಪತಿ ಸಿ.ಎನ್. ಅವರ ಮೇಲೆ ದಾಳಿ ನಡೆಯಿತು. ಬೆಂಗಳೂರಿನ ಆರ್‌ಟಿಒ ಸೂಪರಿಂಟೆಂಡೆಂಟ್ ಕುಮಾರಸ್ವಾಮಿ ಅವರ ಮೇಲೆ ದಾಳಿ ನಡೆಯಿತು. ವಾಹನ ನೋಂದಣಿ ಮತ್ತು ಪರವಾನಗಿ ವಿತರಣೆಯಲ್ಲಿ ಭ್ರಷ್ಟಾಚಾರದ ಆರೋಪಗಳಿವೆ. ಮೈಸೂರು (ಮಡಿಕೇರಿ)ಯ ಪಿಡಬ್ಲ್ಯುಡಿ ಸಹಾಯಕ ಇಂಜಿನಿಯರ್ ಡಿ.ಎಂ. ಗಿರೀಶ್ ಅವರ ಮೇಲೂ ದಾಳಿ ನಡೆದಿದೆ.

# ದತ್ತಪೀಠ ಹಿಂದೂಗಳದ್ದು , ಮೈಸೂರು ಅರಸರು ಸಾವಿರಾರು ಎಕರೆ ದಾನ ನೀಡಿದ ದಾಖಲೆಗಳಿವೆ



**ಚಿಕ್ಕಮಗಳೂರು:** ಕಳೆದ ಮೂರು ದಶಕಗಳಿಂದ ಚಿಕ್ಕಮಗಳೂರಿನ ದತ್ತಪೀಠದ ಉಮೇದುವಾರಿಕೆಗಾಗಿ ಹೋರಾಡ್ತಿದ್ದ ಹಿಂದೂ ಸಂಘಟನೆಗಳು ಇದೀಗ 1831 ಎಕರೆ ದಾನದ ದಾಖಲೆ ಹಿಡಿದು ದತ್ತಪೀಠ ಹಿಂದೂಗಳದ್ದೇ ಎನ್ನುತಿದ್ದಾರೆ. ಈ ಮಧ್ಯೆ ದತ್ತಪೀಠದ ವಿರುದ್ಧ ಹಾಕಿದ್ದ ಎಲ್ಲಾ ಕೇಸ್‌ಗಳು ವಜಾಗೊಂಡಿದ್ದು ದತ್ತಪೀಠ ಮುಜರಾಯಿ ಸುಪರ್ದಿಗೆ ಬಂದಿದೆ. ಆದರೆ, ಮೂರು ವರ್ಷದ ಹಿಂದೆ ಬಿಜೆಪಿ ಸರ್ಕಾರ ನೇಮಿಸಿದ್ದ ದತ್ತಪೀಠ ವ್ಯವಸ್ಥಾಪನಾ ಸಮಿತಿಯ ಅವಧಿ ಕೂಡ ಮುಗಿದಿದ್ದು , ಹೊಸ ಸಮಿತಿ ರಚಿಸದ ಸರ್ಕಾರ ಎಡಿಸಿಯವರನ್ನ ಆಡಳಿತಾಧಿಕಾರಿಯಾಗಿ ನೇಮಿಸಿದೆ.

ಆದರೆ, ಸಮಿತಿ ಸದಸ್ಯರು ಸರ್ಕಾರ ಹಾಗೂ ಜಿಲ್ಲಾಡಳಿತದ ವಿರುದ್ಧ ಆಕ್ರೋಶ ಹೊರಹಾಕಿದ್ದಾರೆ. ಕರ್ನಾಟಕದ ಅಯೋಧ್ಯೆ ಎಂದೇ ಕರೆಸಿಕೊಳ್ಳೋ ಚಿಕ್ಕಮಗಳೂರು ತಾಲೂಕಿನ ದತ್ತಪೀಠ ಹಿಂದೂ-ಮುಸ್ಲಿಮರ ಧಾರ್ಮಿಕ ಭಾವ್ಯಕ್ಯತೆಯ ಜೊತೆ ಸ್ವಾಭಿಮಾನದ ಸಂಕೇತ ಕೂಡ ಹೌದು. ಹಾಗಾಗಿಯೇ, ಮೂರು ದಶಕಗಳಿಂದ ಎರಡೂ ಧರ್ಮದವರು ದತ್ತಪೀಠದ ಉಮೇದುವಾರಿಕೆಗೆ ಕಾನೂನಿನ ಒಳಗೂ ಹೊರಗೂ ಹೋರಾಡ್ತಿದ್ದಾರೆ.

ಈಗ ಹಿಂದೂ ಸಂಘಟನೆಗಳು ದತ್ತಪೀಠ ಸಂಪೂರ್ಣ ಹಿಂದೂಗಳದ್ದು. ರಾಣಿ ಚೆನ್ನಮ್ಮ-ಮೈಸೂರು ಮಹಾರಾಜರು ಸಾವಿರಾರು ಎಕರೆ ಭೂಮಿಯನ್ನ ದತ್ತಪೀಠಕ್ಕೆ ದಾನವಾಗಿ ನೀಡಿದ್ರು. ಅದಕ್ಕೆ ಇನಾಂ ದತ್ತಾತ್ರೇಯ ಪೀಠ ಎಂದು ಹೆಸರು ಬಂದಿದ್ದು. ಆದ್ರೆ, ಸ್ವತಂತ್ರ ಬಂದ ಬಳಿಕ ಸರ್ಕಾರಗಳು ಬೇರೆಯವರಿಗೆ ಪರಭಾರೆ ಮಾಡಿದ್ರಿಂದ ಅದನ್ನ ಅವರು ಸ್ವಂತಕ್ಕೆ ಬಳಸಿಕೊಳ್ತಿದ್ದಾರೆ. ಸರ್ಕಾರ ದತ್ತಪೀಠದ ಭೂಮಿಯನ್ನ ದೇವಾಲಯಕ್ಕೆ ಬಿಡಿಸಬೇಕು ಎಂದು ಆಗ್ರಹಿಸಿದ್ದಾರೆ. ವಕ್ಫ್ ಬೋರ್ಡ್ ದತ್ತಪೀಠ ತನ್ನ ಸುಪರ್ದಿಗೆ ಬರಬೇಕು ಎಂದು ತೆಗೆದುಕೊಂಡಿತ್ತು.

ಆದ್ರೆ, ದತ್ತಪೀಠ ವ್ಯವಸ್ಥಾಪನಾ ಸಮಿತಿ-ಶಾಖಾದ್ರಿ ನೀಡಿದ ಕೇಸಿನ ಆಧಾರದ ಮೇಲೆ ವಜಾ ಮಾಡಿ ಮುಜರಾಯಿ ಇಲಾಖೆ ಸಂಪೂರ್ಣ ದತ್ತಪೀಠದ ಆಡಳಿತ ತನ್ನ ಸುಪರ್ದಿಗೆ ತೆಗೆದುಕೊಂಡಿದೆ. ದತ್ತಪೀಠ ಹಿಂದೂ ಗಳದ್ದು. ದಾಖಲೆಗಳು-ಇತಿಹಾಸ ದತ್ತಪೀಠ ಹಿಂದೂಗಳದ್ದೇ ಎಂದು ಹೇಳುತ್ತಿದೆ. ಸರ್ಕಾರ ದತ್ತಪೀಠವನ್ನ ಹಿಂದೂಗಳಿಗೆ ಒಪ್ಪಿಸಬೇಕೆಂದು ಆಗ್ರಹಿಸಿವೆ

# 2047ರಲ್ಲಿ ವಿಕಸಿತ ಭಾರತ ನಿರ್ಮಾಣಕ್ಕೆ ರಾಮನ ಗುಣ ಮೈಗೂಡಿಸಿಕೊಳ್ಳಬೇಕು ಮೋದಿ



**ಲ ಕ್ನೋ :** 2047ರಲ್ಲಿ ವಿಕಸಿತ ಭಾರತ ನಿರ್ಮಾಣ ಮಾಡಲು ರಾಮನ ಗುಣ ಮೈಗೂಡಿಸಿಕೊಳ್ಳಬೇಕು ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ಅಯೋಧ್ಯೆ ರಾಮ ಮಂದಿರದಲ್ಲಿ ಧರ್ಮ ಧ್ವಜಾರೋಹಣ ನೆರವೇರಿಸಿದ ಬಳಿಕ ಮಾತನಾಡಿದ ಅವರು, ಇಂದು ಅಯೋಧ್ಯೆ ನಗರ ಹೊಸ ಇತಿಹಾಸಕ್ಕೆ ಸಾಕ್ಷಿಯಾಗಿದೆ. ಸಂಪೂರ್ಣ ಭಾರತ, ವಿಶ್ವ ರಾಮಮಯವಾಗಿದೆ. 500 ವರ್ಷಗಳ ಯಜ್ಞ ಇಂದು ಪೂರ್ಣಗೊಂಡಿದೆ. ರಾಮ ಭಕ್ತರ ಮನಸ್ಸಿನಲ್ಲಿ ಅಪಾರ ಆನಂದವಿದೆ. ವರ್ಷಗಳ ಪ್ರಾರ್ಥನೆ ಇಂದು ಸಿದ್ಧಿಯಾಗಿದೆ. ಇದು ಕೇವಲ ಧ್ವಜ ಅಲ್ಲ, ಭಾರತೀಯ ಸಭ್ಯತೆಯ ಪ್ರತೀಕ. ಈ ಧ್ವಜ ರಾಮರಾಜ್ಯವನ್ನು ಪ್ರತಿರೂಪಿಸುತ್ತದೆ. ಈ ಧ್ವಜ ಸಂತರ ಸಾಧನೆ, ಶ್ರೀರಾಮನ ಆದರ್ಶದ ಉದ್ಘೋಷವಾಗಿದೆ. ಧ್ವಜ ರಾಮ ಮಂದಿರದ ಕಿರೀಟ. ಗೆಲುವು ಸತ್ಯಕ್ಕೆ ಸಿಗಲಿದೆ ಎಂದರು.

ಈ ಧ್ವಜ ದೂರದಿಂದಲೇ ರಾಮ ಮಂದಿರದ ದರ್ಶನ ಮಾಡಿಸುತ್ತದೆ. ರಾಮ ಮಂದಿರಾ ನಿರ್ಮಾಣಕ್ಕೆ ಸಹಕಾರ ನೀಡಿದ ಎಲ್ಲರಿಗೂ ಧನ್ಯವಾದ ತಿಳಿಸುತ್ತೇನೆ. ವಿಕಸಿತ ಭಾರತ ನಮ್ಮ ಸಂಕಲ್ಪವಾಗಿದೆ. ಒಂದೇ ಸ್ಥಳದಲ್ಲಿ ವಾಲ್ಮೀಕಿ, ಅಹಲ್ಯ ಸೇರಿ ಎಲ್ಲ ಪ್ರಮುಖರಿದ್ದಾರೆ. ರಾಮ ಮಂದಿರಕ್ಕೆ ಬರುವವರು ಆವರಣದಲ್ಲಿರುವ ಏಳು ಮಂದಿರಕ್ಕೆ ಭೇಟಿ ನೀಡಿ ಅವರ ಜೀವನದ ಮೌ ಲ್ಯ ಗ ಳ ನ್ನು ಮೈಗೂಡಿಸಿಕೊಳ್ಳಬೇಕು. ರಾಮನಿಂದ ರಾಷ್ಟ್ರ ನಿರ್ಮಾಣ ಮಾಡಬೇಕು ಎಂದು ಸಲಹೆ ನೀಡಿದರು. ವರ್ತಮಾನದ ಬಗ್ಗೆ ಯೋಚಿಸುವವರು ಭವಿಷ್ಯದ ಪೀಳಿಗೆಗೆ ಅನ್ಯಾಯ ಮಾಡಿದಂತೆ. ನಾವು ಭವಿಷ್ಯದ ಪೀಳಿಗೆ ಬಗ್ಗೆ ಯೋಚಿಸಬೇಕು.

ನಾವು ದೂರದೃಷ್ಟಿಯೊಂದಿಗೆ ಕೆಲಸ ಮಾಡಬೇಕು. ಅದಕ್ಕಾಗಿ ನಾವು ಶ್ರೀರಾಮನ ವ್ಯಕ್ತಿತ್ವದಿಂದ ಕಲಿಯಬೇಕು. ರಾಮ ಅಂದರೆ ಆದರ್ಶ, ರಾಮ ಅಂದರೆ ಪುರುಷೋತ್ತಮ. ರಾಮ ಅಂದರೆ ಧರ್ಮದ ದಾರಿಯಲ್ಲಿ ನಡೆಯುವವ, ಕ್ಷಮೆಯ ಗುಣ, ಜ್ಞಾನ ವಿವೇಕ, ಕೃತಜ್ಞತೆ, ಸೌಮ್ಯ ಸ್ವಭಾವದ ಧೃಡತೆ, ರಾಮ ಅಂದರೆ ಸತ್ಯದ ಬುನಾದಿ, ನಿಷ್ಕಲ್ಮಶ ಮನಸ್ಸು. ರಾಮ ಓರ್ವ ವ್ಯಕ್ತಿಯಲ್ಲ ಅವರೊಂದು ಮೌಲ್ಯ, ಅವರೊಂದು ದಿಕ್ಕು ಎಂದು ಅಭಿಪ್ರಾಯಪಟ್ಟರು. ಭರತ ತನ್ನ ಸೇನೆ ಜೊತೆಗೆ ಚಿತ್ರಕೂಟ ತಲುಪಿದಾಗ ಲಕ್ಷ್ಮಣ ದೂರದಿಂದಲೇ ಅಯೋಧ್ಯೆ ಸೇನೆಯನ್ನು ಕಂಡು ಹಿಡಿದರು. ವಾಲ್ಮೀಕಿಯವರು ಇದನ್ನು ಉಲ್ಲೇಖಿಸಿದ್ದಾರೆ. ಅದೇ ರೀತಿ ಧ್ವಜ ದೂರದಿಂದಲೇ ಅಯೋಧ್ಯೆಯನ್ನು ಸಂಕೇತಿಸುತ್ತದೆ. ಭಾರತ ಪ್ರಜಾಪ್ರಭುತ್ವದ ಮೂಲವಾಗಿದೆ. ತಮಿಳುನಾಡಿನಲ್ಲಿ ಪ್ರಜಾಪ್ರಭುತ್ವ ವ್ಯವಸ್ಥೆ ಇದ್ದ ಉಲ್ಲೇಖ ಇದೆ. ಬಸವಣ್ಣನ ಅನುಭವ ಮಂಟಪ ಇನ್ನೊಂದು ಉದಾಹರಣೆ. ಸಾಮಾಜಿಕ, ಆರ್ಥಿಕ ಎಲ್ಲ ಆಯಾಮದ ಬಗ್ಗೆ ಚರ್ಚೆ ಮಾಡಿ ನಿರ್ಧಾರ ತೆಗೆದುಕೊಳ್ಳಲಾಗುತ್ತಿತ್ತು. ಇದು ಬರೀ ಧ್ವಜ ಡಿಸೈನ್ ಬದಲಾವಣೆ ಅಲ್ಲ, ಈ ಧ್ವಜ ಗುಲಾಮಿ ಮನಸ್ಥಿತಿ ತೆಗೆದುಹಾಕಿರುವುದನ್ನು ತೋರಿಸುತ್ತದೆ. ಭಾರತ ಮೆಕಾಲೆ ಮನಸ್ಥಿತಿಯಿಂದ ಹೊರಬಂದಿದೆ ಎಂದರು. ಅಯೋಧ್ಯೆ ಭಾರತದ ಸಾಂಸ್ಕೃತಿಕ ಕೇಂದ್ರ. ಅಯೋಧ್ಯೆ ವಿಕಸಿತ ಭಾರತದ ಪ್ರಭಾರಿಯಾಗಲಿದೆ. ಪ್ರಾಚೀನತೆ ಜೊತೆಗೆ ಆಧುನಿಕತೆಯ ಸಂಗಮ ಅಯೋಧ್ಯೆಯಾಗಲಿದೆ.

ಅಯೋಧ್ಯೆಯಲ್ಲಿ ವಿಮಾನ ನಿಲ್ದಾಣ, ರೈಲ್ವೆ ಸ್ಟೇಷನ್ ಇದೆ. ಅಯೋಧ್ಯೆಯನ್ನು ಜಾಗತಿಕವಾಗಿ ಸಂಪರ್ಕಿಸಲಾಗುತ್ತಿದೆ. ಅಯೋಧ್ಯೆ ಯುಪಿಯ ಅಗ್ರ ನಗರಗಳಲ್ಲಿ ಒಂದಾಗಿ ಬೆಳೆಯುತ್ತಿದೆ, ಸಾಕಷ್ಟು ಅಭಿವೃದ್ಧಿಯಾಗಿದೆ. ಕಳೆದ 11 ವರ್ಷದಲ್ಲಿ ವಿಶ್ವದ 5ನೇ ಬಲಿಷ್ಠವಾಗಿದೆ, ಶೀಘ್ರದಲ್ಲಿ ಮೂರನೇ ಬಲಿಷ್ಠ ಆರ್ಥಿಕತೆಯಾಗಲಿದೆ ಎಂದು ನುಡಿದರು.

# ವರದಕ್ಷಿಣೆಗಾಗಿ ಪತ್ನಿ ಮೇಲೆ GBA ಮಾರ್ಷಲ್ ದರ್ಪ ಆರೋಪ – ಮಹಿಳೆ ನೇಣಿಗೆ ಶರಣು

**ಬೆಂಗಳೂರು:** ಮಹಿಳೆಯೊಬ್ಬಳು ನೇಣಿಗೆ ಶರಣಾದ ಘಟನೆ ಬೆಂಗಳೂರಿನ ಗೋವಿಂದ ರಾಜನಗರದಲ್ಲಿ ನಡೆದಿದ್ದು , ಪತಿಯ ವಿರುದ್ಧ ವರದಕ್ಷಿಣೆ ಕಿರುಕುಳ ನೀಡಿ ಕೊಲೆ ಮಾಡಿರುವ ಆರೋಪ ಕೇಳಿಬಂದಿದೆ. ನೇಣಿಗೆ ಶರಣಾದ ಮಹಿಳೆಯನ್ನು ಬೆಳಗಾವಿಯ (Belagavi) ಗೋಕಾಕ್ ಮೂಲದ ರೇಖಾ ಎಂದು ಗುರುತಿಸಲಾಗಿದೆ. ಮಹಿಳೆಯ ಪತಿ ಮಾಯಪ್ಪ ವರದಕ್ಷಿಣೆ ಕಿರುಕುಳ ನೀಡಿ ಕೊಲೆಗೈದಿದ್ದಾನೆ ಎಂದು ರೇಖಾ ಪೋಷಕರು ಆರೋಪಿಸಿದ್ದಾರೆ. ಪ್ರೀತಿಸಿ ಮದುವೆಯಾದ ಜೋಡಿ ಸುಖ ಸಂಸಾರವನ್ನ ಸಾಗಿಸಬೇಕಾಗಿತ್ತು.


ಆದ್ರೆ ಹೋಗ್ತಾ ಹೋಗ್ತಾ ಸಂಸಾರ ಹಳಿ ತಪ್ಪಿತ್ತು ಎನ್ನಲಾಗಿದೆ ಸಣ್ಣ ಪುಟ್ಟ ವಿಚಾರಕ್ಕೂ ಮನೆಯಲ್ಲಿ ಗಲಾಟೆ, ಜೊತೆಗೆ ಕುಡಿತದ ಚಟ ಹೊಂದಿದ್ದ ಜಿಬಿಎ ಮಾರ್ಷಲ್ (GBA) ಮನೆಗೆ ಬಂದು ಹೆಂಡತಿ ಮೇಲೆ ದರ್ಪ ತೋರಿಸುತ್ತಿದ್ದ. ಅಷ್ಟೇ ಅಲ್ಲದೇ ವರದಕ್ಷಿಣೆ ಕಿರುಕುಳ ಕೂಡ ನೀಡ್ತಿದ್ದನಂತೆ. ಇದರಿಂದ ಬೇಸತ್ತ ಮಹಿಳೆ ನೇಣಿನ ಕುಣಿಕೆಗೆ ಶರಣಾಗಿದ್ದಾಳೆ. ಇದು ಆತ್ಮಹತ್ಯೆ ಅಲ್ಲವೇ ಅಲ್ಲ ಕೊಲೆ ಅಂತಾ ಕುಟುಂಬಸ್ಥರು ಆರೋಪಿಸಿದ್ದಾರೆ. ಇನ್ನೂ ರೇಖಾ ಸಾವು ಇಬ್ಬರು ಪುಟ್ಟ ಮಕ್ಕಳು ಅನಾಥರಾಗುವಂತೆ ಮಾಡಿದೆ.

ಪತಿ ಪತ್ನಿ ಇಬ್ಬರು ಬೆಳಗಾವಿ ಜಿಲ್ಲೆಯ ಗೋಕಾಕ್ ಮೂಲದವರು. ರೇಖಾ ಕಾಲೇಜಿಗೆ ಹೋಗ್ತಿದ್ದಾಗ ಅದೇ ಕಾಲೇಜಿನಲ್ಲಿ ಮಾಯಪ್ಪ ಕ್ಲರ್ಕ್ ಆಗಿದ್ದ. ಅಲ್ಲಿ ಇಬ್ಬರ ಮಧ್ಯೆ ಪ್ರೀತಿ ಚಿಗುರೊಡೆದಿತ್ತು. ಅದೇ ಪ್ರೀತಿ ಮದು ವೆಯಲ್ಲಿ ಆರಂ ಭವಾಗಿ ಈಗ ರೇಖಾಳ ಅಹ ಸಜ ಸಾವಿನಲ್ಲಿ ಕೊನೆಯಾಗಿದೆ. ಕಳೆದ ಆರು ವರ್ಷದ ಹಿಂದೆ ಇಬ್ಬರು ವಿವಾಹವಾಗಿದ್ರು. ಮಾಯಪ್ಪ ಬೆಂಗಳೂರಿಗೆ ಬಂದು ಬಿಬಿಎಂಪಿ ಮಾರ್ಷಲ್ ಆಗಿ ಕೆಲಸ ಮಾಡಿಕೊಂಡಿದ್ದ. ಬೆಂಗಳೂರಿನ ಗೋವಿಂದ ರಾಜನಗರದಲ್ಲಿ ಬಾಡಿಗೆ ಮನೆ ಪಡೆದು 4 ವರ್ಷದ ಮಗಳು ಹಾಗೂ 2 ವರ್ಷದ ಮಗನ ಜೊತೆಗೆ ವಾಸವಿದ್ದರು.

ಆದ್ರೆ ಕುಡಿತದ ಚಟಕ್ಕೆ ಬಿದ್ದ ಆಸಾಮಿಯು ರೇಖಾಳಿಗೆ ಹಿಂಸೆ ಕೊಡಲು ಪ್ರಾರಂಭಿಸಿದ್ದ. ವರದಕ್ಷಿಣೆ ಹಣ ತರುವಂತೆ ಪೀಡಿಸ್ತಿದ್ದ. ಇದರಿಂದಾಗಿ ಆಕೆ ಮನನೊಂದು ನೇಣಿಗೆ ಕೊರಳೊಡ್ಡಿದ್ದಾಳೆ.

ನನ್ನ ಮಗಳು ಒಳ್ಳೆಯವಳು, ಅವಳ ಗಂಡ ಕುಡಿದು ಹೊಡೆಯುತ್ತಿದ್ದ , ವರದಕ್ಷಿಣೆಗಾಗಿ ಪೀಡಿಸುತ್ತಿದ್ದ , ಚಿನ್ನ ಬೆಳ್ಳಿಯನ್ನ ನೀಡಿದ್ರು , ಅವನ ಹಿಂಸೆ ನಿಂತಿಲ್ಲ, ಅವನೇ ಕೊಲೆ ಮಾಡಿದ್ದಾನೆ. ನನ್ನ ಮಗಳ ಸಾವಿಗೆ ನ್ಯಾಯ ಸಿಗಬೇಕು, ಈ ಇಬ್ಬರು ಸಣ್ಣ ಮಕ್ಕಳಿಗೆ ಯಾರು ಹೊಣೆ, ಎಂದು ರೇಖಾಳ ತಂದೆ ಕಣ್ಣೀರಿಟ್ಟಿದ್ದಾರೆ. ಅಸಹಜ ಸಾವು ಪ್ರಕರಣ ದಾಖಲಿಸಿ ಕೊಂಡಿರುವ ಗೋವಿಂದರಾಜನಗರ ಠಾಣೆ ಪೊಲೀಸರು ಮಾಯಪ್ಪನನ್ನ ವಶಕ್ಕೆ ಪಡೆದಿದ್ದಾರೆ. ಘಟನೆಗೆ ನಿಖರ ಕಾರಣ ಏನು ಅನ್ನೋದು ತನಿಖೆ ಯಿಂದ ಹೊರಬರಬೇಕಾಗಿದೆ.

# ಪಾಕ್‌ನ ಅರೆಸೇನಾ ಪಡೆಯ ಕಚೇರಿ ಮೇಲೆ ಉಗ್ರರ ದಾಳಿ 6 ಮಂದಿ ಸಾವು



**ಪೇಶಾವರ:** ಪಾಕಿಸ್ತಾನದ ಖೈಬರ್ ಪಖ್ತೂನ್‌ಖ್ವಾ ಪ್ರಾಂತ್ಯದ ರಾಜಧಾನಿ ಪೇಶಾವರದಲ್ಲಿ ಇಂದು ಬೆಳಗ್ಗೆ ಭೀಕರ ಉಗ್ರರ ದಾಳಿ ನಡೆದಿದೆ. ಫ್ರಾಂಟಿಯರ್ ಕಾನ್‌ಸ್ಟಾಬ್ಯುಲರಿ (ಎಫ್‌ಸಿ)ಯ ಪ್ರಧಾನ ಕಚೇರಿ ಮತ್ತು ರಕ್ಷಣಾ ಸಂಕೀರ್ಣದ ಮೇಲೆ ಆತ್ಮಾಹುತಿ ಬಾಂಬರ್‌ಗಳು ಹಾಗೂ ಬಂದೂಕುಧಾರಿಗಳು ಏಕಕಾಲದಲ್ಲಿ ದಾಳಿ ನಡೆಸಿದ್ದು , ಒಟ್ಟು ಆರು ಮಂದಿ ಮೃತಪಟ್ಟಿದ್ದಾರೆ. ಮೃತರಲ್ಲಿ ಮೂವರು ಉಗ್ರರು ಮತ್ತು ಮೂವರು ಎಫ್‌ಸಿ ಭದ್ರತಾ ಸಿಬ್ಬಂದಿ ಸೇರಿದ್ದಾರೆ. ಈ ದಾಳಿಯ ಹೊಣೆಯನ್ನು ತೆಹ್ರೀಕ್-ಇ-ತಾಲಿಬಾನ್ ಪಾಕಿಸ್ತಾನ್ (ಟಿಟಿಪಿ)ಯ ಕಟ್ಟಾ ಬಣ ಜಮಾತುಲ್ ಅಹ್ರಾರ್ ಹೊತ್ತುಕೊಂಡಿದೆ.

ವರದಿ ಪ್ರಕಾರ, ಆತ್ಮಹತ್ಯಾ ಬಾಂಬರ್‌ಗಳಿಬ್ಬರು ರಕ್ಷಣಾ ಸಂಕೀರ್ಣದ ವಿಭಿನ್ನ ಭಾಗಗಳ ಮೇಲೆ ದಾಳಿ ನಡೆಸಿದ್ದಾರೆ. ಮೊದಲ ಆತ್ಮಾಹುತಿ ಬಾಂಬರ್ ಪ್ರಧಾನ ಗೇಟ್ ಬಳಿ ನಿಂತಿದ್ದ ಎಫ್‌ಸಿ ಭದ್ರತಾ ಸಿಬ್ಬಂದಿಯ ಮೇಲೆ ಬಾಂಬ್ ಸಿಡಿಸಿದ್ದರೆ, ಇನ್ನೊಬ್ಬ ದಾಳಿಕೋರ ಕಚೇರಿಯ ಒಳಾಂಗಣ ಮೈದಾನದವರೆಗೆ ನುಗ್ಗಿದ್ದಾನೆ ಎಂದು ಭದ್ರತಾ ಮೂಲಗಳು ತಿಳಿಸಿವೆ.

ಘಟನೆ ನಡೆದ ತಕ್ಷಣ ಸೇನಾ ಪಡೆ ಮತ್ತು ಪೊಲೀಸರು ಸಂಪೂರ್ಣ ಪ್ರದೇಶವನ್ನು ಸುತ್ತುವರೆದು ಭದ್ರತೆ ಬಿಗಿಗೊಳಿಸಿದರು. "ಪ್ರಧಾನ ಕಚೇರಿಯೊಳಗೆ ಇನ್ನೂ ಕೆಲ ಭಯೋತ್ಪಾದಕರು ಅಡಗಿಕೊಂಡಿರುವ ಸಾಧ್ಯತೆ ಇರುವುದರಿಂದ ಶೋಧ ಕಾರ್ಯ ಎಚ್ಚರಿಕೆಯಿಂದ ನಡೆಯುತ್ತಿದೆ," ಎಂದು ಹಿರಿಯ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಇದರಿಂದ ಸಂಚಲನ ಸೃಷ್ಠಿಯಾಗಿ, ಸುತ್ತಮುತ್ತಿನ ರಸ್ತೆಗಳನ್ನೆಲ್ಲ ತಕ್ಷಣವೇ ಬಂದ್ ಮಾಡಲಾಯಿತು.

ಸೋಷಿಯಲ್ ಮೀಡಿಯಾದಲ್ಲಿ ಹರಿದಾಡುತ್ತಿರುವ ದೃಶ್ಯಗಳಲ್ಲಿ ಭದ್ರತಾ ಸಿಬ್ಬಂದಿ ಮತ್ತು ದಾಳಿಕೋರರ ನಡುವೆ ನಡೆದ ಗುಂಡಿನ ದಾಳಿಯ ತೀವ್ರತೆ ಸ್ಪಷ್ಟವಾಗಿ ಕಾಣಿಸಿದೆ. ಸ್ಥಳೀಯ ಮಾಧ್ಯಮಗಳು ನೀಡಿರುವ ಮಾಹಿತಿ ಪ್ರಕಾರ, ಮೃತಪಟ್ಟ ಎಫ್‌ಸಿ ಅಧಿಕಾರಿಗಳು ದಾಳಿ ನಡೆದ ಕ್ಷಣದಲ್ಲಿ ಗೇಟ್ ಬಳಿ ಕರ್ತವ್ಯ ನಿರ್ವಹಿಸುತ್ತಿದ್ದರು. ಪೇಶಾವರದ ಪೊಲೀಸ್ ಮುಖ್ಯಸ್ಥ ಸಯೀದ್ ಅಹ್ಮದ್ ಅವರ ಪ್ರಕಾರ, "ದಾಳಿ ಸಂಭವಿಸಿದ ಸಮಯದಲ್ಲಿ ಬೆಳಗಿನ ಪರೇಡ್ ಅಭ್ಯಾಸ ನಡೆಯುತ್ತಿತ್ತು. ಮೈದಾನದಲ್ಲಿ ಹೆಚ್ಚಿನ ಸಂಖ್ಯೆಯ ಭದ್ರತಾ ಸಿಬ್ಬಂದಿ ಹಾಜರಿದ್ದರು. ದೊಡ್ಡ ದುರಂತವಾಗಬಹುದಾದ ಪರಿಸ್ಥಿತಿಯನ್ನು ನಮ್ಮ ಪಡೆಗಳು ತಡೆದಿವೆ," ಎಂದು ತಿಳಿಸಿದ್ದಾರೆ.

"ಈ ದಾಳಿಯಲ್ಲಿ ಭಾಗವಹಿಸಿದ್ದ ಉಗ್ರರು ಕಾಲ್ನಡಿಗೆಯಲ್ಲಿಯೇ ಆಗಮಿಸಿದ್ದರು. ಶೀಘ್ರ ಕಾರ್ಯಾಚರಣೆಯಿಂದ ನಾವು ಹೆಚ್ಚಿನ ಪ್ರಾಣಾಪಾಯವನ್ನು ತಪ್ಪಿಸಿದೆವು," ಎಂದು ಅವರು ಹೇಳಿದರು. ದಾಳಿಯಲ್ಲಿ ಕನಿಷ್ಠ ಆರು ನಾಗರಿಕರು ಗಾಯಗೊಂಡಿದ್ದು , ಅವರನ್ನು ಪೇಶಾವರದ ಲೇಡಿ ರೀಡಿಂಗ್ ಆಸ್ಪತ್ರೆಗೆ ದಾಖಲಿಸಲಾಗಿದೆ.

ಈ ದಾಳಿಯ ಹೊಣೆಗಾರಿಕೆಯನ್ನು ಪಾಕಿಸ್ತಾನದ ಭಯೋತ್ಪಾದಕ ಸಂಘಟನೆ ತೆಹ್ರೀಕ್-ಇ-ತಾಲಿಬಾನ್ ಪಾಕಿಸ್ತಾನ್ (ಟಿಟಿಪಿ)ನ ಜಮಾತುಲ್ ಅಹ್ರಾರ್ ಉಪ ಘಟಕ ಹೊತ್ತುಕೊಂಡಿದೆ.

# ವ್ಯಾಪಾರಿಯ ಬಳಿ ಚಿನ್ನ ದರೋಡೆ – ಇಬ್ಬರು ಪಿಎಸ್‌ಐ ಸೇರಿ ನಾಲ್ವರು ಅರೆಸ್ಟ್



**ದಾವಣಗೆರೆ:** ಚಿನ್ನದ ವ್ಯಾಪಾರಿ ಬಳಿ ದರೋಡೆ ಮಾಡಿದ್ದ ಇಬ್ಬರು ಪಿಎಸ್‌ಐ ಸೇರಿ ನಾಲ್ವರನ್ನು ದಾವಣಗೆರೆಯ ಕೆಟಿಜೆ ನಗರ ಠಾಣೆ ಪೊಲೀಸರು ಬಂಧಿಸಿದ್ದಾರೆ. ಬಂಧಿತ ಪಿಎಸ್‌ಐಗಳನ್ನು ಮಾಳಪ್ಪ ಚಿಪ್ಪಲಕಟ್ಟಿ , ಪ್ರವೀಣ್ ಕುಮಾರ್ ಎಂದು ಗುರುತಿಸಲಾಗಿದೆ. ಈ ಇಬ್ಬರಿಗೆ ಸಹಕರಿಸಿದ್ದ ಚಿನ್ನದಂಗಡಿಯ ಕೆಲಸಗಾರರಾದ ಸತೀಶ್ ರೇವಣಕರ್, ನಾಗರಾಜ್ ರೇವ ಣಕರ್ ಎಂಬವರನ್ನು ಸಹ ಪೊಲೀ ಸರು ಬಂಧಿಸಿದ್ದಾರೆ. ಈ ಆರೋ ಪಿಗಳು ಪಿಎಸ್‌ಐ ಗಳಿಗೆ ವ್ಯಾಪಾರಿ ಬಳಿ ಚಿನ್ನ ಇರುವುದರ ಬಗ್ಗೆ ಮಾಹಿತಿ ನೀಡಿದ್ದರು ಎಂದು ತಿಳಿದುಬಂದಿದೆ. ಇಬ್ಬಿಬರು ಎಸ್‌ಐಗಳು ವರ್ಗಾವಣೆ ಆಗಿ ಐಜಿ ಅಫೀಸ್‌ನಲ್ಲಿ ರಿಪೋರ್ಟ್ ಮಾಡಿಕೊಂಡಿದ್ದರು ಎಂದು ತಿಳಿದುಬಂದಿದೆ. ಕಾರವಾರ ಮೂಲದ ವ್ಯಾಪಾರಿ ವಿಶ್ವನಾಥ್ ಅರ್ಕಸಾಲಿ ಎಂಬವರು 80 ಗ್ರಾಂ ಬಂಗಾರದ ಒಡವೆಗಳನ್ನು ತೆಗೆದುಕೊಂಡು ದಾವಣಗೆರೆಯ ಬಸ್ ನಿಲ್ದಾಣಕ್ಕೆ ಬಂದಿದ್ದರು.

ಈ ವೇಳೆ ಮಾಳಪ್ಪ ಚಿಪ್ಪಲಕಟ್ಟಿ , ಪ್ರವೀಣ್ ಕುಮಾರ್ ಸೇರಿ ವ್ಯಾಪಾರಿಗೆ ನಾವು ಐಜಿ ಸ್ಕ್ವಾಡ್ ಎಂದು ಹೇಳಿ ಹೆದರಿಸಿದ್ದರು. ಪೊಲೀಸ್ ಐಡಿ ಕಾರ್ಡ್, ನಕಲಿ ಗನ್ ತೋರಿಸಿ ಕೆಟಿಜೆ ನಗರ ಪೊಲೀಸ್ ಠಾಣೆಗೆ ಕಾರಿನಲ್ಲಿ ಕರೆದೊಯ್ದು , ಒಳಗೆ ಹೋಗದೆ ವಾಪಸ್ ಕರೆತಂದಿದ್ದರು. ಬಳಿಕ ವ್ಯಾಪಾರಿಯ ಬಳಿ ಇದ್ದ ಬಂಗಾರವನ್ನು ಕಸಿದುಕೊಂಡು ಬಸ್ ನಿಲ್ದಾಣದಲ್ಲಿ ಬಿಟ್ಟು ಹೋಗಿದ್ದರು. ಬಂಗಾರ ಕಳೆದುಕೊಂಡ ವ್ಯಾಪಾರಿ ಕೆಟಿಜೆ ನಗರ ಪೊಲೀಸ್ ಠಾಣೆಗೆ ದೂರು ನೀಡಿದ್ದರು. ತನಿಖೆ ಕೈಗೊಂಡ ಕೆಟಿಜೆ ನಗರ ಪೊಲೀಸರು ಆರೋಪಿಗಳನ್ನು ಬಂಧಿಸಿ, ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದ್ದಾರೆ. ಕೃತ್ಯಕ್ಕೆ ಬಳಸಿದ ಕಾರನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ

# ಆತ್ಮಸಾಕ್ಷಿ ನಂಬಿದ್ದೇನೆ, ಆತ್ಮಸಾಕ್ಷಿಗೆ ತಕ್ಕಂತೆ ನಾವು ಕೆಲಸ ಮಾಡಬೇಕು ಡಿ.ಕೆ ಶಿವಕುಮಾರ್



**ಕನಕಪುರ,:** "ನಾನು ಆ ತ್ಮ ಸಾ ಕ್ಷಿ ಯ ನ್ನು ನಂಬಿದ್ದೇನೆ. ಆತ್ಮಸಾಕ್ಷಿಗೆ ತಕ್ಕಂತೆ ನಾವು ಕೆಲಸ ಮಾಡಬೇಕು. ಪಕ್ಷಕ್ಕೆ ಮುಜುಗರ ತರಲು, ಪಕ್ಷವನ್ನು ದುರ್ಬಲಗೊಳಿಸಲು ನನಗೆ ಇಷ್ಟವಿಲ್ಲ. ಪಕ್ಷ ಹಾಗೂ ಕಾರ್ಯಕರ್ತರು ಇದ್ದರೆ ನಾವು" ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ತಿಳಿಸಿದರು.

ಬೆಂಗಳೂರು ದಕ್ಷಿಣ ಜಿಲ್ಲೆ ಕನಕಪುರದಲ್ಲಿ ಮಾತನಾಡಿದ ಶಿವಕುಮಾರ್ ಅವರು, ಮಲ್ಲಿಕಾರ್ಜುನ ಖರ್ಗೆ ಅವರು ದೆಹಲಿಗೆ ತೆರಳಿದ್ದು , ರಾಹುಲ್ ಗಾಂಧಿ ಅವರೊಂದಿಗೆ ಅಧಿಕಾರ ಹಸ್ತಾಂತರದ ಬಗ್ಗೆ ಚರ್ಚೆ ನಡೆಸಲಿದ್ದಾರೆಯೇ ಎಂದು ಕೇಳಿದಾಗ, "ಈ ವಿಚಾರ ನನಗೆ ಗೊತ್ತಿಲ್ಲ. ಇದು ನಮ್ಮ ಐದಾರು ಜನರ ನಡುವಿನ ಗುಟ್ಟಿನ ವಿಚಾರ. ಇದನ್ನು ನಾನು ಬಹಿರಂಗ ಮಾಡುವುದಿಲ್ಲ. ಸಿಎಂ ಹಿರಿಯ ನಾಯಕರು, ನಮ್ಮ ಪಕ್ಷದ ಆಸ್ತಿ. ಅವರು ಸಿಎಂ ಆಗಿ ಏಳೂವರೆ ವರ್ಷಗಳ ಕಾಲ ಅಧಿಕಾರ ನಡೆಸಿದ್ದಾರೆ. ಮುಂದಿನ ಬಜೆಟ್ ಅನ್ನು ಅವರೇ ಮಂಡಿಸುವುದಾಗಿ ಹೇಳಿದ್ದಾರೆ.

ಬಹಳ ಸಂತೋಷ. ಅವರು ವಿರೋಧ ಪಕ್ಷದ ನಾಯಕರಾಗಿ ಶ್ರಮಿಸಿದ್ದಾರೆ. ಪಕ್ಷ ಕಟ್ಟಿದ್ದಾರೆ. ನಾವೆಲ್ಲರೂ ಸೇರಿ 2028 ಹಾಗೂ 2029ರ ಚುನಾವಣೆ ಗುರಿಯತ್ತ ಗಮನ ಹರಿಸಬೇಕು" ಎಂದು ತಿಳಿಸಿದರು. ನನ್ನ ಕಷ್ಟಕಾಲದಲ್ಲಿ ಜನರು ಮಾಡಿದ್ದ ಪ್ರಾರ್ಥನೆ ಮರೆಯುವುದಿಲ್ಲ

ನೀವು ಸಿಎಂ ಆಗಬೇಕು ಎಂದು ಜನರು ಪೂಜೆ ಮಾಡುತ್ತಿದ್ದಾರಲ್ಲಾ ಎಂದಾಗ, "ನನಗೆ ಅಧಿಕಾರ ಸಿಗಲಿ ಎಂದು ಈಗ ಪೂಜೆ ಮಾಡುತ್ತಿರುವುದಕ್ಕಿಂತ, ನಾನು ಜೈಲಿಗೆ ಹೋದಾಗ ನನ್ನ ತಾಯಂದಿರು, ಯುವಕರು, ಹಿರಿಯರು ದೇವಾಲಯದ ಅರ್ಚಕರು ಮಾಡಿದ ಪ್ರಾರ್ಥನೆಯನ್ನು ಮರೆಯಲು ಸಾಧ್ಯವಿಲ್ಲ. ಬಿಜೆಪಿ ಅವಧಿಯಲ್ಲಿ ನಾನು ಜೈಲಿಂದ ಬಿಡುಗಡೆ ಆದಾಗ ಪೊಲೀಸರ ಬೆದರಿಕೆಗೂ ಹಿಂಜರಿಯದೇ ನನ್ನನ್ನು ಜನ ಸ್ವಾಗತಿಸಿದರು. ನಾನು ಜೈಲಲ್ಲಿ ಇದ್ದಾಗ ಕರವೇ ನಾರಾಯಣ ಗೌಡರಿಗೆ ಪ್ರತಿಭಟನೆ ನಡೆಸದಂತೆ ಪೊಲೀಸ್ ಅಧಿಕಾರಿ ಭಾಸ್ಕರ್ ರಾವ್ ಅವರು ಬೆದರಿಕೆ ಹಾಕಿದ್ದರು. ಕೆಲವು ಸ್ವಾಮೀಜಿಗಳು ಬಂದರು, ಕೆಲವರು ಬರಲಿಲ್ಲ. ಚನ್ನಪಟ್ಟಣದಲ್ಲಿ ಮಾಜಿ ಸಿಎಂ ಕುಮಾರಸ್ವಾಮಿ ಬೇರೆ ಹೇಳಿಕೆ ಕೊಟ್ಟರು.

ಅನೇಕರು ನಮ್ಮ ಮನೆಗೆ ಬಂದು ನನ್ನ ಪತ್ನಿ ಹಾಗೂ ಮಕ್ಕಳ ಜೊತೆ ಮಾತನಾಡಿ ಧೈರ್ಯ ತುಂಬಿದ್ದರು. ಅಂದು ಜನ ಹರಕೆ ಹೊತ್ತು ಪ್ರಾರ್ಥಿಸಿದ್ದರು. ಆಗ ಕಟ್ಟಿಕೊಂಡ ಹರಕೆ ಮುಗಿಸಲು ಇನ್ನೂ ನನಗೆ ಆಗುತ್ತಿಲ್ಲ. ಅನೇಕರು ನಾನು ಬಿಡುಗಡೆಯಾಗುವವರೆಗೂ ಕಾಲಿಗೆ ಚಪ್ಪಲಿ ಹಾಕಿರಲಿಲ್ಲ. ನಾನು ಇಂದು ಡಿಸಿಎಂ ಆಗಿದ್ದು , ಪಕ್ಷದ ಅಧ್ಯಕ್ಷನಾಗಿದ್ದೇನೆ. ಕಷ್ಟಕಾಲದಲ್ಲಿದ್ದಾಗ ಮಾಡಿದ ಪ್ರಾರ್ಥನೆ, ಆಗ ಅವರು ನನಗೆ ಆತ್ಮಸ್ಥೈರ್ಯ ತುಂಬಿದ್ದು ನನಗೆ ಬಹಳ ವಿಶೇಷ" ಎಂದು ತಿಳಿಸಿದರು.

ನಿಮ್ಮನ್ನು ಸಿಎಂ ಸ್ಥಾನದಲ್ಲಿ ನೋಡಬೇಕು ಎಂದು ಜಿಲ್ಲೆಯ ನಾಲ್ಕೂ ಕ್ಷೇತ್ರಗಳಲ್ಲೂ ಜನ ಪಕ್ಷಕ್ಕೆ ಬೆಂಬಲ ನೀಡಿದ್ದಾರೆ ಅಲ್ಲವೇ ಎಂದು ಕೇಳಿದಾಗ, "ನಾನು ಚುನಾವಣೆ ಸಂದರ್ಭದಲ್ಲಿ ಮಹದೇವಪ್ಪ ಅವರ ಕ್ಷೇತ್ರ, ಮಂಡ್ಯ ಸೇರಿದಂತೆ ಎಲ್ಲಾ ಕಡೆಗಳಲ್ಲಿ ನನ್ನ ಮುಖ ನೋಡಿ ಮತ ಹಾಕಿ ಎಂದೂ ಕೇಳಿದ್ದೇನೆ. ಜನ ನಮ್ಮ ಸಾಮೂಹಿಕ ನಾಯಕತ್ವಕ್ಕೆ ಮತ ಹಾಕಿದ್ದಾರೆ. ನನ್ನೊಬ್ಬನಿಗಾಗಿ ಮತ ಹಾಕಿದ್ದಾರೆ ಎಂದು ನಾನು ಹೇಳುವುದಿಲ್ಲ. 224 ಕ್ಷೇತ್ರಗಳಲ್ಲಿ ನಮಗಿಂತ ನಮ್ಮ ಕಾರ್ಯಕರ್ತರು ಹೆಚ್ಚು ಶ್ರಮ ಹಾಕಿದ್ದಾರೆ" ಎಂದು ತಿಳಿಸಿದರು.

ಅನೇಕ ಕೆಲಸಗಳ ಮಧ್ಯೆ ಕಾರ್ಯಕರ್ತರ ಚುನಾವಣೆಗೆ ಬಂದಿದ್ದೀರಿ ಎಂದು ಕೇಳಿದಾಗ, "ಕಾರ್ಯಕರ್ತರು ಎಂದರೆ ನಾವು. ರಾಮಕೃಷ್ಣ ಹೆಗಡೆ ಅವರು ಸಿಎಂ ಆಗಿದ್ದಾಗ ಇದೇ ಚುನಾವಣೆಗೆ ನಾನು ಹಾಗೂ ಶ್ರೀಕಂಠಯ್ಯ ಅವರು ಚುನಾವಣೆಗೆ ಸ್ಪರ್ಧಿಸಿದ್ದೆವು. ಉಳಿದಂತೆ ಜನತಾದಳದಿಂದ ಸ್ಪರ್ಧಿಸಿದ್ದರು. ನನ್ನ ರಾಜಕೀಯ ಬದುಕಿನ ಮೊದಲ ಚುನಾವಣೆ ಅದಾಗಿತ್ತು. ಕನಕಪುರದಲ್ಲಿ ಈ ಚುನಾವಣೆ ಗೆದ್ದು ನಿರ್ದೇಶಕನಾಗಿ ಆಯ್ಕೆಯಾಗಿದ್ದೆ. ಆಗ ಆಸ್ಕರ್ ಫರ್ನಾಂಡೀಸ್ ಅವರು ಇದೇ ಕಟ್ಟಡದ ಕೋಣೆಯಲ್ಲಿ ಒಂದು ತಿಂಗಳು ಇದ್ದು , ಚುನಾವಣೆ ಮಾಡಿದ್ದರು. ಇದು ಕಾರ್ಯಕರ್ತರ ಚುನಾವಣೆ.

ಕಾರ್ಯಕರ್ತರು ನನ್ನ ಚುನಾವಣೆ ಮಾಡುವಾಗ, ನಾನು ಅವರ ಚುನಾವಣೆಗೆ ಬಂದು ಮತ ಹಾಕದಿದ್ದರೆ ನನ್ನಿಂದ ಕರ್ತವ್ಯ ಲೋಪವಾಗುತ್ತದೆ. ಕಾರ್ಯಕರ್ತರು ಬಲಿಷ್ಠವಾಗಿದ್ದರೆ ಮಾತ್ರ ನಾವು ಬಲಿಷ್ಠವಾಗುತ್ತೇವೆ. ಚುನಾವಣೆಯಲ್ಲಿ ರಾಜಿ ಮಾಡಿಕೊಳ್ಳಿ ಎಂದು ಕೇಳಿದರು ನಾವೇ ಚುನಾವಣೆ ಆಗಲಿ, ಕಾರ್ಯಕರ್ತರಿಗೆ ಚುನಾವಣೆ ಅನುಭವವಾಗಲಿ ಎಂದು ಹೇಳಿದ್ದೇವೆ.

ನಾವು ಸಂಸತ್ ಚುನಾವಣೆ ವೇಳೆ ಯಾಮಾರಿದೆವು, ಎಷ್ಟೋ ಬೂತ್ ಗಳಿಗೆ ಏಜೆಂಟ್ ಗಳು ಇರಲಿಲ್ಲ. ಒಳೇಟು ಯಾವ ರೀತಿ ಬಿತ್ತು ಎಂದು ತಿಳಿಯಲಿಲ್ಲ. ನಾವು ನಮ್ಮ ತಪ್ಪನ್ನು ತಿದ್ದುಕೊಳ್ಳುತ್ತೇವೆ. ರಾಜಕಾರಣದಲ್ಲಿ ನಮ್ಮ ವೈರಿ ಯಾರು ಎಂದು ತಿಳಿಯಬೇಕು. ಈ ಚುನಾವಣೆಯಲ್ಲಿ ನಮ್ಮ ಪರ ಯಾರು ನಿಂತಿದ್ದಾರೆ, ವಿರುದ್ಧ ಯಾರು ನಿಂತಿದ್ದಾರೆ ಎಂದು ತಿಳಿಯುತ್ತದೆ. ಹೀಗಾಗಿ ಚುನಾವಣೆ ಮಾಡುತ್ತಿದ್ದೇವೆ" ಎಂದು ತಿಳಿಸಿದರು.

ಪಕ್ಷ ಸಂಘಟನೆಗೆ ಇಂತಹ ಚುನಾವಣೆಗಳು ಮುಖ್ಯವೇ ಎಂದು ಕೇಳಿದಾಗ, "ಪಕ್ಷಕ್ಕೆ ಮೂಲ ಸ್ವರೂಪ ಇಲ್ಲವಾದರೆ ಯಾವ ಪಕ್ಷವೂ ಇರಲು ಸಾಧ್ಯವಿಲ್ಲ. ಇದು ನಮ್ಮ ಮೂಲ. ಸೊಸೈಟಿ, ಹಾಲಿನ ಒಕ್ಕೂಟ, ಪಿಎಲ್ ಡಿ, ಮುನ್ಸಿಪಾಲಿಟಿ, ಪಂಚಾಯ್ತಿಗಳು ನಮ್ಮ ಆಸ್ತಿಗಳಿದ್ದಂತೆ. ಇಲ್ಲಿರುವುದು 300 ಚಿಲ್ಲರೆ ಮತಗಳು, ಆದರೂ 300 ನಾಯಕರು ಕಾರ್ಯಕರ್ತರ ಗೆಲುವಿಗೆ ಬಂದಿದ್ದಾರೆ. ಹೀಗಾಗಿ ಎಷ್ಟೇ ಕೆಲಸದ ಒತ್ತಡ ಇದ್ದರೂ ಬಂದು ಮತ ಹಾಕುತ್ತಿದ್ದೇನೆ. ನಾವು ಬರಲಿಲ್ಲ ಅಂದರೆ, ನಾಯಕರೇ ಬಂದು ಮತ ಹಾಕಿಲ್ಲ, ನಾವು ಯಾಕೆ ಹಾಕಬೇಕು ಎಂದು ಹಳ್ಳಿಗಳಲ್ಲಿ ಮರ್ಯಾದೆ ತೆಗೆಯುತ್ತಾರೆ" ಎಂದರು.

ಸಚಿವ ಸ್ಥಾನ ಆಕಾಂಕ್ಷಿಗಳು ದೆಹಲಿಗೆ ಹೋಗಿದ್ದಾರೆ

ಕಲ ಶಾಸಕರು ದೆಹಲಿಗೆ ತೆರಳಿದ್ದು , ನಿಮ್ಮನ್ನು ಸಿಎಂ ಮಾಡಲು ಪ್ರಯತ್ನಿಸುತ್ತಿದ್ದಾರೆ ಎಂದು ಕೇಳಿದಾಗ, "ಸಚಿವ ಸ್ಥಾನದ ಆಕಾಂಕ್ಷೆ ಇರುವವರು ಹೋಗಿದ್ದಾರೆ, ನನ್ನನ್ನು ಸಿಎಂ ಮಾಡುವ ಪ್ರಯತ್ನದ ಬಗ್ಗೆ ನನಗೆ ಗೊತ್ತಿಲ್ಲ. ನಾನು ಅವರಿಗೆ ಕರೆ ಮಾಡಿಲ್ಲ, ಅವರನ್ನು ಕಳುಹಿಸಿಲ್ಲ. ಯಾಕೆ ಹೋದಿರಿ ಎಂದು ಪ್ರಶ್ನೆ ಮಾಡುವುದಿಲ್ಲ" ಎಂದರು.

ಅಧಿಕಾರ ಹಂಚಿಕೆ ಒಪ್ಪಂದ ಆಗಿತ್ತೇ ಎಂದು ಕೇಳಿದಾಗ, "ನಾನು ಆ ಬಗ್ಗೆ ಯಾಕೆ ಮಾತನಾಡಲಿ, ನೀವುಗಳೇ (ಮಾಧ್ಯಮಗಳು) ಏನೇನೋ ಬರೆಯುತ್ತಿದ್ದೀರಿ" ಎಂದು ತಿಳಿಸಿದರು.

ಅಧಿಕಾರ ಹಂಚಿಕೆ ವಿಚಾರವಾಗಿ ಬಸವರಾಜ ರಾಯರೆಡ್ಡಿ, ಸದಾನಂದ ಗೌಡರ ಹೇಳಿಕೆ ಬಗ್ಗೆ ಕೇಳಿದಾಗ, "ನಾನು ಯಾರ ಹೇಳಿಕೆಗೂ ಪ್ರತಿಕ್ರಿಯೆ ನೀಡುವುದಿಲ್ಲ. ನಾನು ಅವರ ವಕ್ತಾರನಲ್ಲ" ಎಂದು ತಿಳಿಸಿದರು.

ಸುದ್ದಿ ಹಾಗೂ ಜಾಹಿರಾತುಗಳಿಗಾಗಿ
ಸಂಪರ್ಕಿಸಿ:
9538786812
9880655634

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.